RNI: KARKAN\2019\78042



ಸಂಪಾದಕರು : ಸಿ.ಎನ್.ಸಮಗಂಡಿ.

# ಸತ್ಯಮಿಥ್ಯ

ನಿಮ್ಮ ಪ್ರತಿಬಿಂಬ ಕನ್ನಡ ದಿನ ಪತ್ರಿಕೆ

Satyamithi Kannada Daily Morning

ಚನ್ನು ಮೆನ್ಸ್‌ವೇರ್
ಕೋಳ್ಯವರ ಕ್ರಾಸ್,
ಚನ್ನು ಸ್ಟಿಚ್‌ವರ್ಲ್ಡ್
ಬಿ.ಎಸ್.ಎನ್.ಎಲ್, ಆಫೀಸ್ ಹತ್ತಿರ,
ಜೆಂಟ್ಸ್ ಸ್ಪೇಷಲಿಸ್ಟ್ ಟೇಲರ್
ಗಜೇಂದ್ರಗಡ-582114.
ಸೆಲ್ : 9986982482, 9686165708

ಉತ್ತರ ಕರ್ನಾಟಕದ ಕಲಾವಿದರನ್ನು ಒಳಗೊಂಡ ವಿಶಿಷ್ಟ ಪ್ರಯೋಗ » 2

ದೇವಲ ಗಾಣಗಾಪೂರ ಜಿಪಂ ಅಖಾಡಕ್ಕೆ ಪ್ರಿಯಾಂಕ ಭಟ್ ಪೂಜಾರಿ? » 3

ಮೈಸೂರು ದಸರಾ ಪರಂಪರೆ, ಇತಿಹಾಸ ಮತ್ತು ಗತವೈಭವ » 4

ಸಂಪುಟ(Volume): 1 ಸಂಚಿಕೆ (Issue): 87 ● ಪುಟ (Page): 4 ● ದರ: Rs. 4 ಶುಕ್ರವಾರ 9 ಅಕ್ಟೋಬರ್ 2026 ● 9 OCTOBER 2026 ● ಧಾರವಾಡ ● ಹಾವೇರಿ ● ಗದಗ ● ಕೊಪ್ಪಳ ● ವಿಜಯನಗರ ● ರಾಯಚೂರು ● ವಿಜಯಪುರ ● ಬಾಗಲಕೋಟೆ

# ಬೆನಚಮಟ್ಟಿ ಕೆರೆಯಲ್ಲಿ ಅಕ್ರಮ ಮರಳುಗಾರಿಕೆ : ಪ್ರಕರಣ ಕುರಿತು ಮಾಹಿತಿ ನೀಡದ ಅಧಿಕಾರಿಗಳು

**ಗಜೇಂದ್ರಗಡ / ಗದಗ:** ತಾಲೂಕಿನ ಬೆನಸಮಟ್ಟಿ ಕೆರೆಯಲ್ಲಿ ಬೃಹತ್ ಪ್ರಮಾಣದ ಅಕ್ರಮ ಮರಳು ಸಂಗ್ರಹಣೆಯಾಗಿರುವ ಗಂಭೀರ ಪ್ರಕರಣವೊಂದು ಬೆಳಕಿಗೆ ಬಂದಿದ್ದು, ಈ ಅಕ್ರಮದ ವಿರುದ್ಧ ಕ್ರಮ ಕೈಗೊಳ್ಳಬೇಕಾದ ಅಧಿಕಾರಿಗಳ ನಡವಳಿಕೆ ಇದೀಗ ಸಾರ್ವಜನಿಕ ವಲಯದಲ್ಲಿ ತೀವ್ರ ಅನುಮಾನಗಳಿಗೆ ಕಾರಣವಾಗಿದೆ.

100ಕ್ಕೂ ಹೆಚ್ಚು ಟ್ರಿಪ್ ಮರಳು ಸಂಗ್ರಹ!

ಬೆನಸಮಟ್ಟಿ ಕೆರೆಯಲ್ಲಿ ಯಾವುದೇ ಭಯವಿಲ್ಲದೆ ಬರೋಬ್ಬರಿ 100ಕ್ಕೂ ಹೆಚ್ಚು ಟ್ರಿಪ್ ಅಕ್ರಮ ಮರಳನ್ನು ಸಂಗ್ರಹಿಸಿಡಲಾಗಿತ್ತು. ಈ ಕುರಿತು ಮಾಹಿತಿ ತಿಳಿದ ಗದಗ ಜಿಲ್ಲಾ ಮಟ್ಟದ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಅಧಿಕಾರಿ ಪ್ರಮೀಳಾ ಕೆ. ಸಿ., ತಹಸೀಲ್ದಾರ್ ಕಿರಣ ಕುಮಾರ ಕುಲಕರ್ಣಿ ಹಾಗೂ ಸ್ಥಳೀಯ ಪಿಎಸ್‌ಐ ಪ್ರಕಾಶ.ಡಿ.ಜಂಟಿಯಾಗಿ ಅಕ್ಟೋಬರ್ 6, ಮಂಗಳವಾರದಂದು ಸ್ಥಳ ಪರಿಶೀಲನೆ ಹಾಗೂ ದಾಳಿ ನಡೆಸಿದರು.

**ದಾಳಿಯ ಹೆಸರಲ್ಲಿ ನಾಟಕ? ಸಿಗದ ವಾಹನಗಳು!:** ತಾಲೂಕಿನಾದ್ಯಂತ ಅಕ್ರಮ ಮರಳು ಮತ್ತು ಗರಸು ಸಾಗಾಣಿಕೆ ನಿರಂತರವಾಗಿ ನಡೆಯುತ್ತಿದ್ದರೂ ಇಲ್ಲಿಯವರೆಗೆ ಕಣ್ಣುಮುಚ್ಚಿ ಕುಳಿತಿದ್ದ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಅಧಿಕಾರಿಗಳು, ಕೊನೆಗೂ ಜಾಗೃತರಾಗಿ



ದಾಳಿ ನಡೆಸಿದರಾದರೂ ಸ್ಥಳದಲ್ಲಿ ಒಂದೇ ಒಂದು ವಾಹನವೂ ಸಿಗದಿರುವುದು ಹಲವು ಅನುಮಾನಗಳನ್ನು ಹುಟ್ಟುಹಾಕಿದೆ. ದಾಳಿಯ ಮುನ್ಸೂಚನೆ ಮೊದಲೇ ತಲುಪಿತ್ತೇ ಎಂಬ ಪ್ರಶ್ನೆ ಸಾರ್ವಜನಿಕರಲ್ಲಿ ಮೂಡಿದೆ.

**ಮಾಧ್ಯಮಗಳಿಗೆ, ಸಂಘಟನೆಗಳಿಗೆ ತಹಸೀಲ್ದಾರ್ ಮತ್ತು ಗಣಿ ಮತ್ತು ಭೂ ವಿಜ್ಞಾನ ಅಧಿಕಾರಿಗಳ ಹಾರಿಕೆ ಉತ್ತರ:** ಪ್ರಕರಣ ಕುರಿತು ಸತ್ಯಾಸತ್ಯತೆ ತಿಳಿಯಲು ಗಣಿ ಮತ್ತು ಭೂ ವಿಜ್ಞಾನ ಅಧಿಕಾರಿ ಮತ್ತು ತಹಸೀಲ್ದಾರವರಿಗೆ ಪ್ರಶ್ನಿಸಿದ ಮಾಧ್ಯಮ ಪ್ರತಿನಿಧಿಗಳಿಗೆ ಮತ್ತು ವಿವಿಧ ಸಂಘಟನೆಯ ಮುಖಂಡರಿಗೆ ಪ್ರಮೀಳಾ ಅವರು ಸರಿಯಾಗಿ ಮಾಹಿತಿಯನ್ನು ನೀಡುತ್ತಿಲ್ಲ ಮತ್ತು ಗಜೇಂದ್ರಗಡ ತಹಸೀಲ್ದಾರ್ ದಾರಿ ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ ಎಂಬ ಗಂಭೀರ ಆರೋಪ ಕೇಳಿಬಂದಿದೆ.

ಎಷ್ಟು ಮರಳು ವಶಪಡಿಸಿಕೊಳ್ಳಲಾಗಿದೆ? ಎಂಬ ಮಾಧ್ಯಮಗಳ ಪ್ರಶ್ನೆಗೆ, "ಬೆರಳೆಣಿಕೆಯ ಸಂಖ್ಯೆಯ ಲೋಡ್ ಮರಳು ಮಾತ್ರ ಸಿಕ್ಕಿದೆ" ಎಂದು ಜಾರಿಕೊಂಡಿದ್ದಾರೆ.

ಸ್ಥಳದಲ್ಲಿದ್ದ ಉಳಿದ ಮರಳಿನ ಪ್ರಮಾಣ ಎಷ್ಟು? ಎಂದು ಕೇಳಿದ್ದಕ್ಕೆ, "ಅಲ್ಲಿರುವುದು ಉಪಯೋಗಕ್ಕೆ ಬಾರದ ಮಣ್ಣು, ಅದು ಯಾವುದೇ ಕೆಲಸಕ್ಕೂ ಬರುವುದಿಲ್ಲ" ಎಂದು ಹಾರಿಕೆ ಉತ್ತರ ನೀಡುವ ಮೂಲಕ ಪ್ರಕರಣವನ್ನು ಮುಚ್ಚಿಹಾಕಲು ಯತ್ನಿಸುತ್ತಿದ್ದಾರೆ.



## ಅಧಿಕಾರಿಗಳ ದಾರಿ ತಪ್ಪಿಸಿದ್ರಾ ತಹಸೀಲ್ದಾರ್?

ಘಟನೆಯಲ್ಲಿ ಅತ್ಯಂತ ರೋಚಕ ಸಂಗತಿಯೆಂದರೆ, ಭೂ ಮತ್ತು ಗಣಿ ವಿಜ್ಞಾನ ಇಲಾಖೆಯ ಅಧಿಕಾರಿಗಳು ದಾಳಿ ಮಾಡಲು ಬಂದ ಸ್ಥಳವೇ ಬೇರೆಯಾಗಿತ್ತು. ಆದರೆ ತಹಸೀಲ್ದಾರ್ ಅವರು ಅಧಿಕಾರಿಗಳನ್ನು ಕರೆದುಕೊಂಡು ಹೋಗಿದ್ದೇ ಮತ್ತೊಂದು ಕಡೆಗೆ! ಅಕ್ರಮ ನಡೆದ ಸ್ಥಳಕ್ಕೆ ಅಧಿಕಾರಿಗಳನ್ನು ಕರೆದೊಯ್ಯದೆ ಬೇರೆಡೆಗೆ ಕರೆದೊಯ್ದಿದ್ದರ ಉದ್ದೇಶವೇನು ಎಂಬುದು ಸಾರ್ವಜನಿಕರ ಬಲವಾದ ಸಂಶಯಕ್ಕೆ ಕಾರಣವಾಗಿದೆ. ನಿನ್ನೆ ಬೆಣಚಮಟ್ಟಿ ಕೆರೆಗೆ ನಮ್ಮ ಪ್ರತಿನಿಧಿ ಭೇಟಿ ನೀಡಿದ ಸಂದರ್ಭದಲ್ಲಿ ಕಂಡು ಬಂದ ಹಾಗೇ 100 ಕ್ಕೂ ಹೆಚ್ಚು ಟ್ರಿಪ್ ಉಸುಕು ಸಂಗ್ರಹಣೆಯಾಗಿದ್ದು ಕಂಡು ಬಂದಿದೆ. ದಾಳಿ ವೇಳೆಯಲ್ಲಿ ಸ್ಥಳದಲ್ಲಿ ಯಾವುದೇ ವಾಹನಗಳು ಸಿಗದಿರುವುದು ಮತ್ತು ಅಧಿಕಾರಿಗಳ ಈ ವಿಚಿತ್ರ ನಡೆಗಳನ್ನು ಗಮನಿಸಿದರೆ ಅಕ್ರಮ ಮರಳು ಮಾಫಿಯಾ ಹಾಗೂ ಅಧಿಕಾರಿಗಳ ನಡುವೆ ಒಳ ಒಪ್ಪಂದ ನಡೆದಿದೆಯೇ ಎಂಬ ಸಂಶಯ ದಟ್ಟವಾಗಿದೆ. ಈ ಕುರಿತು ಉನ್ನತ ಮಟ್ಟದ ತನಿಖೆ ನಡೆದು, ಅಕ್ರಮ ಮರಳು ದಂಧೆಗೆ ಸಾಥ್ ನೀಡುತ್ತಿರುವ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಸ್ಥಳೀಯರು ಹಾಗೂ ಸಂಘಟನೆಯ ಮುಖಂಡರು ಒತ್ತಾಯಿಸಿದ್ದಾರೆ.



**ಅಕ್ರಮ ಚಟುವಟಿಕೆ ತಾಣವಾಗಿ ರೋಣ ಮತಕ್ಷೇತ್ರ ಪರಿವರ್ತನೆಯಾಗಿದೆ.**



**ಅಕ್ರಮ ಮರಳು ಸಾಗಾಣಿಕೆ, ಅಕ್ರಮ ಗರಸು ಸಾಗಾಣಿಕೆ, ಐತಿಹಾಸಿಕ ಗುಡ್ಡವೇ ಕರಗುತ್ತಿದೆ, ತಾಲೂಕಾ ದಂಡಾಧಿಕಾರಿಗಳು ಇವೆಲ್ಲ ಚಟುವಟಿಕೆಗಳಿಗೆ ಸಾತ್ ನೀಡುತ್ತಿದ್ದಾರೆ ಎನ್ನುವದು ಮೇಲ್ನೋಟಕ್ಕೆ ಕಂಡು ಬರುತ್ತಿದೆ. ಈ ಎಲ್ಲ ಅಕ್ರಮ ಚಟುವಟಿಕೆಗಳಿಗೆ ಕಡಿವಾಣ ಹಾಕಬೇಕಾದರೆ. ಕಾಲಕಾಲೇಶ್ವರ ವೃತ್ತದಲ್ಲಿರುವ ಸಿ ಸಿ ಕ್ಯಾಮರಾ ಚೆಕ್ ಮಾಡಿದರೆ ಎಲ್ಲ ವಾಹನಗಳು ಸಿಗುತ್ತವೆ. ಜಿಲ್ಲಾಧಿಕಾರಿಗಳು ಸೂಕ್ತ ಕ್ರಮಕೈಗೊಳ್ಳಬೇಕು**

**। ಕಳಕಪ್ಪ ಪೋತಾ, ಜಯ ಕರ್ನಾಟಕ ಜನಪರ ವೇದಿಕೆ ತಾಲೂಕಾಧ್ಯಕ್ಷರು ಗಜೇಂದ್ರಗಡ**

# ಕಪ್ಪತಗುಡ್ಡದಲ್ಲಿ ಗಣಿಗಾರಿಕೆ ಪ್ರಸ್ತಾವನೆ ತಿರಸ್ಕರಿಸಿದ ಮಂಡಳಿ

### ವನ್ಯಜೀವಿ ಮಂಡಳಿ ಸಭೆ । ಅರಣ್ಯ ಪ್ರದೇಶ ಸಂಪೂರ್ಣ ಪ್ಲಾಸ್ಟಿಕ್ ಮುಕ್ತ

**ಸತ್ಯಮಿಥ್ಯ ಸುದ್ದಿಮೂಲ ಬೆಂಗಳೂರು:**

ರಾಜ್ಯದ ವನ್ಯಜೀವಿ ಮತ್ತು ಅರಣ್ಯ ಸಂಪತ್ತಿನ ರಕ್ಷಣೆಗಾಗಿ ಮಹತ್ವದ ತೀರ್ಮಾನಗಳನ್ನು ಕೈಗೊಳ್ಳಲಾಗಿದ್ದು, ಗದಗ ಜಿಲ್ಲೆಯ ಕಪ್ಪತಗುಡ್ಡ ವನ್ಯಜೀವಿಧಾಮದ ಪರಿಸರ ಸೂಕ್ಷ್ಮ ವಲಯದಲ್ಲಿ ಕಟ್ಟಡ ಕಲ್ಲುಗಳ ಗಣಿಗಾರಿಕೆಗೆ ಅನುಮತಿ ಕೋರಿದ್ದ ಪ್ರಸ್ತಾವನೆಯನ್ನು ತಿರಸ್ಕರಿಸಲಾಗಿದೆ. ಅರಣ್ಯ, ಪರಿಸರ ಮತ್ತು ಜೀವ ಪರಿಸರ ಸಚಿವ ರಾಮಲಿಂಗಾರೆಡ್ಡಿ ಅವರ ಅಧ್ಯಕ್ಷತೆಯಲ್ಲಿ ನಡೆದ ರಾಜ್ಯ ವನ್ಯಜೀವಿ ಮಂಡಳಿಯ ಸ್ಥಾಯಿ ಸಮಿತಿಯ 8ನೇ ಸಭೆ ಹಾಗೂ ಹುಲಿ ಸಂರಕ್ಷಿತ ಪ್ರತಿಷ್ಠಾನಗಳ ಆಡಳಿತ ಮಂಡಳಿ ಸಭೆಯಲ್ಲಿ ಈ ನಿರ್ಣಾಯಕ ತೀರ್ಮಾನಗಳನ್ನು ಪ್ರಕಟಿಸಲಾಗಿದೆ.

ಕಪ್ಪತಗುಡ್ಡದಲ್ಲಿ ಗಣಿಗಾರಿಕೆಗೆ ಬ್ರೇಕ್, ಭದ್ರಾ ರೆಸಾರ್ಟ್ ಪ್ರಸ್ತಾವನೆ ಮುಂದೂಡಿಕೆ

ಗದಗದ ಸಮೃದ್ಧ ಜೀವವೈವಿಧ್ಯ ತಾಣವಾಗಿರುವ ಕಪ್ಪತಗುಡ್ಡದ ಪರಿಸರ ಸೂಕ್ಷ್ಮ ವಲಯದಲ್ಲಿ ಕಟ್ಟಡ ಕಲ್ಲು ಗಣಿಗಾರಿಕೆಗೆ ಅನುಮತಿ ನೀಡುವ ಪ್ರಸ್ತಾವನೆಯನ್ನು ರಾಜ್ಯ ವನ್ಯಜೀವಿ ಮಂಡಳಿಯು ವಿವರವಾದ ಚರ್ಚೆಯ ಬಳಿಕ ಸ್ಪಷ್ಟವಾಗಿ ತಳ್ಳಿಹಾಕಿದೆ. ಇದೇ ವೇಳೆ, ಭದ್ರಾ ಹುಲಿ ಸಂರಕ್ಷಿತ ಪ್ರದೇಶದ ಬಫರ್ ವಲಯದಲ್ಲಿರುವ ಖಾಸಗಿ ಜಮೀನಿನಲ್ಲಿ ಪರಿಸರ-ವಿಹಾರಧಾಮ ನಿರ್ಮಿಸುವ ಪ್ರಸ್ತಾವನೆಯನ್ನು ಮುಂದೂಡಲಾಗಿದೆ.

ವಿವಿಧ ರಕ್ಷಿತ ಪ್ರದೇಶಗಳು ಹಾಗೂ ಹುಲಿ ಯೋಜನೆಗಳ ಬಫರ್ ವಲಯಗಳಲ್ಲಿ ಅಧಿಸೂಚನೆ ಹೊರಬಿದ್ದ ನಂತರ ಎಷ್ಟು ರೆಸಾರ್ಟ್ ಮತ್ತು ಹೋಂಸ್ಟೇಗಳು ಅಸ್ತಿತ್ವಕ್ಕೆ ಬಂದಿವೆ ಎಂಬ ಸಮಗ್ರ ವರದಿ ನೀಡುವಂತೆ ಸಚಿವರು ಸೂಚಿಸಿದ್ದು, ಅಕ್ರಮವಾಗಿ ತಲೆಯೆತ್ತಿರುವ ರೆಸಾರ್ಟ್‌ಗಳ ವಿರುದ್ಧ ಮುಲಾಜಿಲ್ಲದೆ ಕಠಿಣ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಆದೇಶಿಸಿದ್ದಾರೆ.

ಇದೇ ವೇಳೆ ಬೆಳ್ತಂಗಡಿಯ ವಿದ್ಯುದ್ದೀಕರಣ, ಶರಾವತಿ ಕಣಿವೆಯಲ್ಲಿ ಬಿಎಸ್‌ಎನ್‌ಎಲ್ 4ಜಿ ಟವರ್ ಹಾಗೂ ಒಎಫ್‌ಸಿ ಕೇಬಲ್ ಅಳವಡಿಕೆ ಮತ್ತು ಹೊನ್ನಾವರ ಸೇತುವೆ ಕಾಮಗಾರಿಗಳ ಪ್ರಸ್ತಾವನೆಗಳನ್ನು ರಾಷ್ಟ್ರೀಯ ವನ್ಯಜೀವಿ ಮಂಡಳಿಗೆ ಶಿಫಾರಸು ಮಾಡಲು ಅನುಮೋದಿಸಲಾಗಿದೆ.

ಶೆಟ್ಟಿಹಳ್ಳಿ ಗಡಿ ಮರುವಿಂಗಡಣೆ ಮತ್ತು ಬನ್ನೇರುಘಟ್ಟ ವಲಯ ಯಥಾಸ್ಥಿತಿ

1974ರಅಧಿಸೂಚನೆಯಲ್ಲಿನಗೊಂದಲಗಳನ್ನುಪರಿಹರಿಸಿ, ಶಿವಮೊಗ್ಗದ ಶೆಟ್ಟಿಹಳ್ಳಿ ವನ್ಯಜೀವಿಧಾಮದ ಗಡಿಯನ್ನು 41 ಅಧಿಸೂಚಿತ ಅರಣ್ಯ ಪ್ರದೇಶಗಳನ್ನೊಳಗೊಂಡ 397.96 ಚದರ ಕಿಲೋಮೀಟರ್‌ಗೆ ವೈಜ್ಞಾನಿಕವಾಗಿ ಮರುವಿಂಗಡಿಸುವ ಅಂತಿಮ ಪ್ರಸ್ತಾವನೆಯನ್ನು ರಾಷ್ಟ್ರೀಯ ವನ್ಯಜೀವಿ ಮಂಡಳಿಗೆ ಸಲ್ಲಿಸಲು ಒಪ್ಪಿಗೆ ಸೂಚಿಸಲಾಯಿತು.



ಮತ್ತೊಂದೆಡೆ, ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವನದ ಆನೆ ಕಾರಿಡಾರ್‌ಗಳು ಈಗಾಗಲೇ ಸೂಕ್ಷ್ಮ ವಲಯದ ವ್ಯಾಪ್ತಿಯಲ್ಲೇ ಇರುವುದರಿಂದ, ಸದ್ಯ ಜಾರಿಯಲ್ಲಿರುವ ಪರಿಸರ ಸೂಕ್ಷ್ಮ ವಲಯದ ಅಧಿಸೂಚನೆಯನ್ನು ಯಾವುದೇ ಮಾರ್ಪಾಡುಗಳಿಲ್ಲದೆ ಯಥಾವತ್ತಾಗಿ ಮುಂದುವರಿಸುವಂತೆ ಕೇಂದ್ರ ಸರ್ಕಾರಕ್ಕೆ ರಾಜ್ಯದ ಅಭಿಪ್ರಾಯ ರವಾನಿಸಲು ತೀರ್ಮಾನಿಸಲಾಗಿದೆ.

**ಅರಣ್ಯ ಪ್ರದೇಶಗಳು ಸಂಪೂರ್ಣ ಪ್ಲಾಸ್ಟಿಕ್ ಮುಕ್ತ: ಸಚಿವರ ಖಡಕ್ ಸೂಚನೆ:** ರಾಜ್ಯದ ಎಲ್ಲಾ ಅರಣ್ಯ ಪ್ರದೇಶಗಳು, ಅದರಲ್ಲೂ ಪ್ರಮುಖವಾಗಿ ಪರಿಸರ ಪ್ರವಾಸೋದ್ಯಮ ತಾಣಗಳನ್ನು ಇಂದಿನಿಂದಲೇ ಸಂಪೂರ್ಣವಾಗಿ ಪ್ಲಾಸ್ಟಿಕ್ ಮುಕ್ತ ವಲಯವನ್ನಾಗಿ ಜಾರಿಗೊಳಿಸಲು ಸಚಿವ ರಾಮಲಿಂಗಾರೆಡ್ಡಿ ಗಡುವು ನೀಡಿದ್ದಾರೆ. ಪ್ರವಾಸಿಗರು ಮತ್ತು ಸ್ಥಳೀಯರಿಂದ ಪ್ಲಾಸ್ಟಿಕ್ ಬಳಕೆಯಾಗದಂತೆ ಆಯಾ ವಲಯದ ಕ್ಷೇತ್ರ ಅಧಿಕಾರಿಗಳು ಕಟ್ಟುನಿಟ್ಟಿನ ಕಣ್ಗಾವಲು ಇಡಬೇಕೆಂದು ತಾಕೀತು ಮಾಡಿದ್ದಾರೆ.



## ಇಕೋ-ಸೆನ್ಸಿಟಿವ್ ವಲಯಗಳು ಇನ್ನು ಸೈಲೆಂಟ್ ಝೋನ್

ಪರಿಸರ ಸೂಕ್ಷ್ಮ ವಲಯಗಳಲ್ಲಿ ಮಾನವ ಹಸ್ತಕ್ಷೇಪ ಹಾಗೂ ಶಬ್ದ ಮಾಲಿನ್ಯವನ್ನು ನಿಯಂತ್ರಿಸುವ ಉದ್ದೇಶದಿಂದ ಇಡೀ ಇಕೋ-ಸೆನ್ಸಿಟಿವ್ ವಲಯಗಳನ್ನು ಕಡ್ಡಾಯವಾಗಿ ಮೌನ ವಲಯಗಳನ್ನಾಗಿ ಘೋಷಿಸಲು ನಿರ್ಧರಿಸಲಾಗಿದೆ. ಈ ಭಾಗಗಳಲ್ಲಿ ಸಾರ್ವಜನಿಕರಿಗೆ ಸೂಕ್ತ ಅರಿವು ಮೂಡಿಸಲು ಮಾಡಬೇಕಾದ ಮತ್ತು ಮಾಡಬಾರದ ಕೆಲಸಗಳ ಮಾರ್ಗಸೂಚಿ ಪ್ರಕಟಿಸುವುದರ ಜೊತೆಗೆ, ತಕ್ಷಣವೇ ಜೋನಲ್ ಮಾಸ್ಟರ್ ಪ್ಲಾನ್ ಸಿದ್ಧಪಡಿಸುವಂತೆ ಸಚಿವರು ಕಟ್ಟುನಿಟ್ಟಿನ ನಿರ್ದೇಶನ ನೀಡಿದ್ದಾರೆ.



## ರಮೇಶ ಜಾರಕಿಹೊಳಿ ಸ್ಟಿಂಗ್ ಮಾಡಿದ್ದು ಯಾರು: ನಾರಾಯಣಸ್ವಾಮಿ ಪ್ರಶ್ನೆ

**ಬೆಂಗಳೂರು:** ರಾಜ್ಯ ರಾಜಕೀಯದಲ್ಲಿ ಸ್ಟಿಂಗ್ ಆಪರೇಷನ್ ಭಾರೀ ಸದ್ದು ಮಾಡುತ್ತಿದ್ದು, ಈ ಸಂಬಂಧ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ ಬಿಜೆಪಿ ನಾಯಕ ಚಲವಾದಿ ನಾರಾಯಣಸ್ವಾಮಿ ಅವರು, ಒಬ್ಬ ಸಿಎಂ ಇಂಥಾ ಕೀಳು ಮಟ್ಟಕ್ಕೆ ಇಳಿಯಬಾರದಿತ್ತು ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಇಂದು ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಚಲವಾದಿ ನಾರಾಯಣಸ್ವಾಮಿ ಅವರು, ರಮೇಶ್ ಜಾರಕಿಹೊಳಿಗೆ ಸ್ಟಿಂಗ್ ಆಪರೇಷನ್ ಮಾಡಿದ್ದು ಯಾರು? ಅವರನ್ನು ರಾಜಕೀಯವಾಗಿ ಮುಗಿಸಲು ಪ್ಲ್ಯಾನ್ ಮಾಡಿದ್ಯಾರು? ಎಂದು ಪ್ರಶ್ನಿಸಿದ್ದಾರೆ. ಸ್ಟಿಂಗ್ ಆಪರೇಷನ್ ವಿಚಾರವಾಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿಕೆಗೆ ಪ್ರತಿಕ್ರಿಯಿಸಿದ ಚಲವಾದಿ ನಾರಾಯಣಸ್ವಾಮಿ, ರಮೇಶ್ ಜಾರಕಿಹೊಳಿ ಅವರನ್ನು ರಾಜಕೀಯ ಮುಗಿಸಲು ಯತ್ನಿಸಿದ್ದು ಯಾರು ಎಂದು ಪ್ರಶ್ನಿಸಿದರು

# ಕೊಪ್ಪಳ, ಯಲಬುರ್ಗಾ, ಕುಷ್ಟಗಿ ತಾಲೂಕಿನಲ್ಲಿ ಡಿಸಿಎಂ ಜಿ. ಪರಮೇಶ್ವರ ಬರ ವೀಕ್ಷಣೆ

**ಸತ್ಯಮಿಥ್ಯ ಸುದ್ದಿಮೂಲ ಕೊಪ್ಪಳ :**

ಉಪ ಮುಖ್ಯಮಂತ್ರಿಗಳಾದ ಡಾ.ಜಿ. ಪರಮೇಶ್ವರ ಅವರು ಅಕ್ಟೋಬರ್ 08ರಂದು ಕೊಪ್ಪಳ ಜಿಲ್ಲೆಗೆ ಭೇಟಿ ನೀಡಿ ಬರ ಪರಿವೀಕ್ಷಣೆ ನಡೆಸಿದರು.

ಬರದ ತೀವ್ರತೆ ಹಿನ್ನೆಲೆಯಲ್ಲಿ, ಕೊಪ್ಪಳ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ ಅವರೊಂದಿಗೆ ಸಂಚಾರ ಆರಂಭಿಸಿದ ಉಪ ಮುಖ್ಯಮಂತ್ರಿಗಳು, ಮೊದಲಿಗೆ ಕೊಪ್ಪಳ ತಾಲೂಕಿನ ವಣಬಳ್ಳಾರಿಗೆ ಭೇಟಿ ನೀಡಿ ರೈತರಾದ ಶಿವಪ್ಪ ಮುದುಕಪ್ಪ ಗೌಡ್ರ ಅವರ ಹೊಲದಲ್ಲಿನ ಮೆಕ್ಕೆಜೋಳ, ತೊಗರಿ ಬೆಳೆ ಹಾಗೂ ಬಿ ಕೃಷ್ಣಮೂರ್ತಿ ಮತ್ತು ಡಿ ಹೊಸಳ್ಳಿ ಸೀಮಾ ಅವರ ಹೊಲದಲ್ಲಿನ ತೊಗರಿ ಮತ್ತು ಹುರುಳಿ ಬೆಳೆಯ ವೀಕ್ಷಣೆ ನಡೆಸಿದರು. ಬಳಿಕ ಯಲಬುರ್ಗಾ ತಾಲೂಕಿನ ಗುನ್ನಾಳ ಗ್ರಾಮಕ್ಕೆ ತೆರಳಿ ಗ್ರಾಮದ ರೈತರಾದ ಮಹೇಶ ಹನುಮಂತಯ್ಯ ಅವರ ಹೊಲದಲ್ಲಿನ ತೊಗರಿ ಬೆಳೆ, ಚನ್ನಬಸವ್ವ ಈಶಪ್ಪ ಉಳ್ಳಾಗಡ್ಡಿ ಅವರ ಹೊಲದಲ್ಲಿನ ಮೆಕ್ಕೆಜೋಳದ ಬೆಳೆಯ ವೀಕ್ಷಣೆ ನಡೆಸಿದರು. ಬಳಿಕ ಕುಷ್ಟಗಿ ತಾಲೂಕಿಗೆ ಸಂಚರಿಸಿ, ತಾಲೂಕಿನ ನಂದಾಪುರ ಗ್ರಾಮಕ್ಕೆ ತೆರಳಿ ರೈತರಾದ ಕರಡಪ್ಪ ಚನ್ನಬಸಪ್ಪ ಅವರ ಹೊಲದಲ್ಲಿನ ತೊಗರಿ ಬೆಳೆಯ ವೀಕ್ಷಣೆ ನಡೆಸಿದರು. ಬೆಳೆಹಾನಿಯ ಪ್ರಮಾಣದ ಬಗ್ಗೆ ಜಿಲ್ಲಾಧಿಕಾರಿಗಳಾದ ಡಾ.ಸುರೇಶ ಇಟ್ನಾಳ ಹಾಗೂ ಕೃಷಿ ಅಧಿಕಾರಿಗಳು ಉಪ ಮುಖ್ಯಮಂತ್ರಿಗಳಿಗೆ ಮಾಹಿತಿ ನೀಡಿದರು.

ರೈತರಿಂದ ಅಹವಾಲು: ಈ ವರ್ಷ ಮಳೆಯಾಗದೇ ಬೆಳೆಗಳು ಸರಿಯಾಗಿ ಬಂದಿಲ್ಲ. ಮಳೆಯಾಗದೇ ಕಾಳು ಕಟ್ಟಿಲ್ಲ. ಬೆಳೆನಷ್ಟಕ್ಕೆ ಸೂಕ್ತ ಪರಿಹಾರ ನೀಡಬೇಕು ಎಂದು ಇದೆ ವೇಳೆ ರೈತರು ಉಪ ಮುಖ್ಯಮಂತ್ರಿಗಳಲ್ಲಿ ಮನವಿ ಮಾಡಿದರು.

ಬರದ ತೀವ್ರತೆ ಹೆಚ್ಚಿದೆ: ಈ ವೇಳೆ ಉಪ ಮುಖ್ಯಮಂತ್ರಿಗಳು ಸುದ್ದಿಗಾರರೊಂದಿಗೆ ಮಾತನಾಡಿ, ರಾಜ್ಯದಲ್ಲಿ ಬರದ ತೀವ್ರತೆ ಹೆಚ್ಚಿದೆ.



ಬೆಳೆಗಳುಸಂಪೂರ್ಣಹಾಳಾಗಿರೈತರುಕಂಗಾಲಾಗಿದ್ದಾರೆ.ಬರಪರಿಸ್ಥಿತಿಯ ದುಸ್ಥಿತಿಯನ್ನು ಖುದ್ದಾಗಿ ನೋಡಲು ತಾವು ಕೊಪ್ಪಳ ಸೇರಿದಂತೆ ಬೇರೆ ಬೇರೆ ಜಿಲ್ಲೆಗಳಲ್ಲಿ ಸಂಚರಿಸುತ್ತಿರುವುದಾಗಿ ಹೇಳಿದರು.

ರಾಜ್ಯದ 240 ತಾಲೂಕುಗಳ ಪೈಕಿ ಈಗಾಗಲೇ 217 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದೆ. ಕೊಪ್ಪಳ ಜಿಲ್ಲೆ ಜೊತೆಗೆ ಪಕ್ಕದ ಜಿಲ್ಲೆಗಳಾದ ವಿಜಯನಗರ, ಬಳ್ಳಾರಿ, ರಾಯಚೂರು ಸೇರಿದಂತೆ ಉತ್ತರ ಕರ್ನಾಟಕದ ವಿವಿಧ ಜಿಲ್ಲೆಗಳಲ್ಲಿ ಮೈಸೂರು ಭಾಗಕ್ಕೆ ಹೋಲಿಸಿದರೆ ಬರದ ತೀವ್ರತೆ ಹೆಚ್ಚಿದೆ. ವಿಜಯನಗರ ಜಿಲ್ಲೆಯಲ್ಲಿ ಶೇ.98ರಷ್ಟು ಬೆಳೆಗಳು ಹಾನಿಗೀಡಾಗಿವೆ. ಕೊಪ್ಪಳ ಜಿಲ್ಲೆಯಲ್ಲಿನ ಎಲ್ಲಾ ಕಡೆಗಳಲ್ಲೂ ಬೆಳೆಗಳು ಮಳೆಯಿಲ್ಲದೆ ಹಾಳಾಗಿವೆ. ನಮ್ಮ ರಾಜ್ಯವು ಅತ್ಯಂತ ಕೆಟ್ಟದಾದ ಬರದ ಪರಿಸ್ಥಿತಿ ಎದುರಿಸುತ್ತಿದೆ. ರೈತರು ಸಾಲ ತೀರಿಸದ ದುಸ್ಥಿತಿಯಲ್ಲಿದ್ದು, ತಲೆ ಮೇಲೆ ಕೈಹೊತ್ತು ಕೂಡುವಂತಾಗಿದೆ. ನಮ್ಮ ಸರ್ಕಾರ ಬರ ನಿರ್ವಹಣೆ, ಕುಡಿವ ನೀರು ಪೂರೈಕೆಗೆ ಒತ್ತು ನೀಡಿದೆ. ರೈತರಿಗೆ ನೆರವು ಮತ್ತು ಕೂಲಿ ಕೆಲಸ ಒದಗಿಸಲು ನಮ್ಮ ಸರ್ಕಾರ ಕ್ರಮ ಜರುಗಿಸುತ್ತಿದೆ ಎಂದು ತಿಳಿಸಿದರು. ಬರದಿಂದಾಗಿ ಬೆಳೆ ಕಳೆದುಕೊಂಡಿರುವ ರೈತರಿಗೆ ಬೆಳೆವಿಮೆ ಹಣವನ್ನು ಶೀಘ್ರ ಒದಗಿಸಲು ಸರ್ಕಾರ ಕ್ರಮಕೈಗೊಳ್ಳುತ್ತಿದೆ. ಅರ್ಹ ರೈತರಿಗೆ ವಿಮಾ ಪರಿಹಾರ ಸಕಾಲಕ್ಕೆ ದೊರೆಯಬೇಕು ಎಂಬುದು ನಮ್ಮ ಸರ್ಕಾರದ ಉದ್ದೇಶವಾಗಿದೆ ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಸಾಹಿಲ್ ಬಾಗ್ಲಾ, ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ, ಜಂಟಿ ಕೃಷಿ ನಿರ್ದೇಶಕರಾದ ಜಿ.ಡಿ. ಕೃಷ್ಣಮೂರ್ತಿ, ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕರಾದ ಕೃಷ್ಣ ಉಕ್ಕುಂದ್, ಪಶುಪಾಲನಾ ಇಲಾಖೆಯ ಉಪನಿರ್ದೇಶಕರಾದಡಾ.ಪಿ.ಎಂ.ಮಲ್ಲಯ್ಯಸೇರಿದಂತೆವಿವಿಧಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು, ತಹಶೀಲ್ದಾರರು ಹಾಗೂ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ಉಪಸ್ಥಿತರಿದ್ದರು.

ಸತ್ಯಮಿಥ್ಯ
SATYA MITHI
Kannada Daily Morning

# ಪುರಾಣದ ವಿವಾಹ ಪ್ರಸಂಗಕ್ಕೆ ಜೀವ ತುಂಬಿದ ಶರಣಬಸವೇಶ್ವರ– ಮಾದಮ್ಮ ಕಲ್ಯಾಣೋತ್ಸವ!

## ಊರೇ ಬಂಧು–ಬಳಗವಾಗಿ ಪಾಲ್ಗೊಂಡ ಅಪರೂಪದ ಸಮಾರಂಭ; ಗ್ರಾಮೀಣ ಮದುವೆಯ ಸೊಗಡಿಗೆ ಸಾಕ್ಷಿಯಾದ ಜಕ್ಕಲಿಯ ಶ್ರೀಮಠ

**ಸಂಗಮೇಶ ಮೆಣಸಗಿ, ಜಕ್ಕಲಿ**

ಪುರಾಣ ಪ್ರವಚನದಲ್ಲಿ ಕೇಳಿಬಂದ ವಿವಾಹ ಪ್ರಸಂಗಕ್ಕೆ ಜೀವಂತ ರೂಪ ನೀಡಿದ ಅಪರೂಪದ ಸಮಾರಂಭವೊಂದು ಸಮೀಪದ ಜಕ್ಕಲಿಯಲ್ಲಿ ಬುಧವಾರ ಭಕ್ತಿ, ಸಂಭ್ರಮ ಹಾಗೂ ಸಾಂಪ್ರದಾಯಿಕ ವೈಭವದೊಂದಿಗೆ ಜರುಗಿತು.

ಇಲ್ಲಿನಹಾಲಕೆರೆಶಾಖಾಶ್ರೀಅನ್ನದಾನೇಶ್ವರಮಠದಜಾತ್ರಾ ಮಹೋತ್ಸವದ ಅಂಗವಾಗಿ ದಸರಾ ಮಹೋತ್ಸವದ ನಿಮಿತ್ತ ತಿಂಗಳ ಪರ್ಯಂತ ನಡೆಯುತ್ತಿರುವ ದ್ಯಾಂಪೂರ ಶ್ರೀ ಕಲ್ಲಿನಾಥ ಕವಿ ವಿರಚಿತ ಮಹಾದಾಸೋಹಿ ಕಲಬುರ್ಗಿ ಶರಣಬಸವೇಶ್ವರ ಪುರಾಣ ಪ್ರವಚನದಲ್ಲಿ ವಿವಾಹ ಪ್ರಸಂಗ ಬಂದ ಹಿನ್ನೆಲೆಯಲ್ಲಿ ಶರಣಬಸವೇಶ್ವರ–ಮಾದಮ್ಮ ಮಾತೆಯ ಕಲ್ಯಾಣೋತ್ಸವವನ್ನು ವಿಶಿಷ್ಟವಾಗಿ ಆಯೋಜಿಸಲಾಗಿತ್ತು.

ವಿವಾಹೋತ್ಸವದ ಮೊದಲ ಹಂತವಾಗಿ ಮಧ್ಯಾಹ್ನ ಶ್ರೀ ಕಲ್ಮೇಶ್ವರ ದೇವಸ್ಥಾನದಿಂದ ಗ್ರಾಮದ ಒಂದು ಭಾಗದ ಸದ್ಭಕ್ತರು ಶ್ರೀ ವೀರಭದ್ರೇಶ್ವರ ದೇವಸ್ಥಾನಕ್ಕೆ ತೆರಳಿ 'ಕನ್ಯೆ ಪರೀಕ್ಷೆ'ಯಲ್ಲಿ ಪಾಲ್ಗೊಂಡರು. ಗಂಡಿನ ಕಡೆಯವರು ಮದುವೆ ಮನೆಯ ನೆಂಟರಿಷ್ಟರಂತೆ ಆಗಮಿಸಿದರೆ, ಹೆಣ್ಣಿನ ಕಡೆಯವರು ಆತ್ಮೀಯವಾಗಿ ಬರಮಾಡಿಕೊಂಡರು.

ಹಳೆಯ ಕಾಲದ ಗ್ರಾಮೀಣ ಮದುವೆಯ ಸಂಪ್ರದಾಯವನ್ನು ನೆನಪಿಸುವಂತೆ ಕನ್ಯೆಯನ್ನು ನೋಡಿ ಮೆಚ್ಚುಗೆ ವ್ಯಕ್ತಪಡಿಸುವ ಸನ್ನಿವೇಶವನ್ನು ಮರುಸೃಷ್ಟಿಸಲಾಯಿತು. ಹಿರಿಯರು ವಧುವನ್ನು ನೋಡಿ ಸಂತಸ ವ್ಯಕ್ತಪಡಿಸಿ, "ವಧು ನಮ್ಮ ಮನಸ್ಸಿಗೆ ಬಂದಿದೆ; ನಿಶ್ಚಿತಾರ್ಥ ಮಾಡಿಕೊಂಡು ಹೋಗಿ" ಎಂದು ಹೇಳಿದಾಗ, ಸಮಾರಂಭಕ್ಕೆ ನೈಜ ಮದುವೆ ಮನೆಯ ವಾತಾವರಣವೇ ಮೂಡಿಬಂದಿತು.

ನಂತರ ಸಂಜೆ ಶ್ರೀ ವೀರಭದ್ರೇಶ್ವರ ದೇವಸ್ಥಾನದಿಂದ ತಂಡೋಪತಂಡವಾಗಿ ಆಗಮಿಸಿದ ಸದ್ಭಕ್ತರು ಶ್ರೀ ಕಲ್ಮೇಶ್ವರ ದೇವಸ್ಥಾನದಲ್ಲಿ ನಿಶ್ಚಿತಾರ್ಥ ನೆರವೇರಿಸಿದರು.



ವರ–ವಧುವಿನ ಕಡೆಯವರು ನೈಜ ಮದುವೆ ಮನೆಯ ಬಂಧು-ಬಾಂಧವರಂತೆ ಭಾಗವಹಿಸಿ ಸಂಪ್ರದಾಯಬದ್ಧ ವಿಧಿವಿಧಾನಗಳನ್ನು ನೆರವೇರಿಸಿದರು.

ಗಂಡಿನ ಕಡೆಯವರಾಗಿ ರೇಖಾ-ಲಿಂಗರಾಜ ಮೇಟಿ ದಂಪತಿ ಹಾಗೂ ಹೆಣ್ಣಿನ ಕಡೆಯವರಾಗಿ ವಿಜಯಲಕ್ಷ್ಮೀ-ಸುಭಾಷ ಕಡಗದ ದಂಪತಿ ಪ್ರಮುಖವಾಗಿ ಪಾಲ್ಗೊಂಡು ವಿವಿಧ ವಿವಾಹ ಶಾಸ್ತ್ರಗಳನ್ನು ನೆರವೇರಿಸಿದರು.

ಜಾತಿ, ಧರ್ಮ, ಮತ, ಪಂಥದ ಭೇದವಿಲ್ಲದೆ ಗ್ರಾಮದ ಸಮಸ್ತ ಸದ್ಭಕ್ತರು ಪಾಲ್ಗೊಂಡಿದ್ದು ವಿಶೇಷವಾಗಿತ್ತು. ಹಿರಿಯರು–ಕಿರಿಯರು, ಸ್ತ್ರೀ–ಪುರುಷರೆನ್ನದೆ ಎಲ್ಲರೂ ಮದುವೆ ಮನೆಯ ಬಂಧು–ಬಾಂಧವರಂತೆ ಸಂಭ್ರಮದಲ್ಲಿ ತೊಡಗಿಸಿಕೊಂಡರು.

ಗ್ರಾಮದ ಒಂದು ಭಾಗದವರು ಗಂಡಿನ ಕಡೆಯವರಾಗಿ ಹಾಗೂ ಮತ್ತೊಂದು ಭಾಗದವರು ಹೆಣ್ಣಿನ ಕಡೆಯವರಾಗಿ ಭಾಗವಹಿಸಿದ್ದರಿಂದ ಇಡೀ ಜಕ್ಕಲಿ ಗ್ರಾಮವೇ ಮದುವೆ ಮನೆಯಾಗಿ ಕಂಗೊಳಿಸಿತು.

ನಿಶ್ಚಿತಾರ್ಥದ ಬಳಿಕ ರಾತ್ರಿ ಶ್ರೀ ಕಲ್ಮೇಶ್ವರ ದೇವಸ್ಥಾನದಿಂದ ಶ್ರೀ ವೀರಭದ್ರೇಶ್ವರ ದೇವಸ್ಥಾನ ಮಾರ್ಗವಾಗಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ಶರಣಬಸವೇಶ್ವರ-ಮಾದಮ್ಮ ಮಾತೆಯ ಮೂರ್ತಿಗಳ ಮೆರವಣಿಗೆ ನಡೆಯಿತು. ಮೆರವಣಿಗೆ ಶ್ರೀ ಅನ್ನದಾನೇಶ್ವರ ಶ್ರೀಮಠವನ್ನು ತಲುಪಿತು.

ಡೊಳ್ಳಿನ ಭರ್ಜರಿ ನಾದ, ಮಂಗಳವಾದ್ಯ ಹಾಗೂ ಭಕ್ತರ ಹರ್ಷೋದ್ಗಾರದಿಂದ ಗ್ರಾಮದ ಬೀದಿಗಳಲ್ಲಿ ಮದುವೆಯ ಸಂಭ್ರಮ ಮನೆ ಮಾಡಿತ್ತು. ಮನೆಗಳ ಮುಂಭಾಗ ನಿಂತು ಮೆರವಣಿಗೆ ವೀಕ್ಷಿಸಿದ ಜನರು, 'ಇದು ಪುರಾಣದ ಸನ್ನಿವೇಶವೋ... ನಿಜವಾದ ಮದುವೆಯೋ...' ಎಂಬಂತೆ ಸಂಭ್ರಮಿಸಿದರು.

ರಾತ್ರಿ ಪುರಾಣ ಪ್ರವಚನದ ಬಳಿಕ ಶ್ರೀ ಅನ್ನದಾನೇಶ್ವರ ಕಲ್ಯಾಣ ಮಂಟಪದಲ್ಲಿ ವಿಶೇಷವಾಗಿ ಅಲಂಕರಿಸಿದ್ದ ವೇದಿಕೆಯಲ್ಲಿ ಶರಣಬಸವೇಶ್ವರ ಹಾಗೂ ಮಾದಮ್ಮ ಮಾತೆಯ ಮೂರ್ತಿಗಳನ್ನು ಪ್ರತಿಷ್ಠಾಪಿಸಿ ವಿವಾಹ ಕಾರ್ಯ ನೆರವೇರಿಸಲಾಯಿತು.

ಶರಣಯ್ಯ ಹಿರೇಮಠ ಅವರ ನೇತೃತ್ವದಲ್ಲಿ ಪುರಾಣ ಪ್ರವಚನ ಪಟು ವೇ.ಮೂ. ಗುರುಸಿದ್ದೇಶ್ವರ ಶಾಸ್ತ್ರಿಗಳು ಹಾಗೂ ವೇ.ಮೂ. ಗುರುಲಿಂಗಮೂರ್ತಿ ಮಂಟಯ್ಯನಮಠ ಅವರ ಪೌರೋಹಿತ್ಯದಲ್ಲಿ ಶಾಸ್ತ್ರೋಕ್ತ ವಿಧಿವಿಧಾನಗಳು ಜರುಗಿದವು.

ಗಂಡಿನ ಕಡೆಯವರಾದ ರೇಖಾ–ಲಿಂಗರಾಜ ಮೇಟಿ ದಂಪತಿ ಹಾಗೂ ಹೆಣ್ಣಿನ ಕಡೆಯವರಾದ ವಿಜಯಲಕ್ಷ್ಮೀ-ಸುಭಾಷ ಕಡಗದ ದಂಪತಿ ನೇತೃತ್ವದಲ್ಲಿ ವಿಳ್ಯೆಕಾರ್ಯ, ಬಾಸಿಂಗ ಕಟ್ಟುವಿಕೆ, ಉಂಗುರ ತೊಡಿಸುವಿಕೆ, ಮಾಂಗಲ್ಯಧಾರಣೆ ಸೇರಿದಂತೆ ವಿವಿಧ ವಿವಾಹ ಶಾಸ್ತ್ರಗಳನ್ನು ನೆರವೇರಿಸಲಾಯಿತು.

ಮಾಂಗಲ್ಯಧಾರಣೆಯ ಸಂದರ್ಭದಲ್ಲಿ ನೆರೆದಿದ್ದ ಭಕ್ತರು ಅಕ್ಷತೆ ಹಾಕಿ ಶುಭ ಹಾರೈಸಿದರು. ಮಂಗಳವಾದ್ಯ, ಮಂತ್ರಘೋಷ ಹಾಗೂ ಭಕ್ತರ ಹರ್ಷೋದ್ಗಾರದಿಂದ ಕಲ್ಯಾಣ ಮಂಟಪ ಭಕ್ತಿಮಯ ವಾತಾವರಣದಿಂದ ಕಂಗೊಳಿಸಿತು.

ವಿವಾಹದ ಬಳಿಕ ಭಕ್ತರಿಗೆ ಸಿಹಿ–ಭಕ್ಷ್ಯ ಭೋಜನ, ಅನ್ನಸಂತರ್ಪಣೆ ಹಾಗೂ ದಾಸೋಹದ ವ್ಯವಸ್ಥೆ ಮಾಡಲಾಗಿತ್ತು.

ಈ ಸಂದರ್ಭದಲ್ಲಿ ಪುರಾಣ ಪ್ರವಚನ ಪಟು ವೇ. ಮೂ. ಎಂ.ಜಿ. ಗುರುಸಿದ್ದೇಶ್ವರ ಶಾಸ್ತ್ರಿಗಳು ಮಾತನಾಡಿ, ಮಹಾದಾಸೋಹಿ ಶಿವಶರಣರ ಬದುಕು ಹಾಗೂ ಆದರ್ಶಗಳು ಯುವಪೀಳಿಗೆಗೆ ದಾರಿದೀಪವಾಗಬೇಕು. ಹಿರಿಯರು ನಡೆಸಿಕೊಂಡು ಬಂದಿರುವ ಇಂತಹ ಆಚರಣೆಗಳು ನಮ್ಮ ಅಮೂಲ್ಯ ಸಂಪ್ರದಾಯಗಳಾಗಿವೆ ಎಂದರು.

ಇಂದಿನ ಯಾಂತ್ರಿಕ ಬದುಕು, ದೂರದರ್ಶನ ಹಾಗೂ ಮೊಬೈಲ್‌ಗಳ ಪ್ರಭಾವದಿಂದ ಪುರಾಣ-ಪುಣ್ಯಕಥೆಗಳು, ಕೀರ್ತನೆಗಳು ಹಾಗೂ ಸಾಂಪ್ರದಾಯಿಕ ಆಚರಣೆಗಳು ನಿಧಾನವಾಗಿ ಮರೆಯಾಗುತ್ತಿರುವುದು ವಿಷಾದದ ಸಂಗತಿ. ಶ್ರೀ ಅನ್ನದಾನೇಶ್ವರ ಮಠದಲ್ಲಿ ಪ್ರತಿವರ್ಷ ಮಹಾತ್ಮರ ಪುರಾಣ ಪ್ರವಚನಗಳನ್ನು ಆಯೋಜಿಸುವ ಮೂಲಕ ಮುಂದಿನ ಪೀಳಿಗೆಗೆ ಅಧ್ಯಾತ್ಮಜ್ಞಾನ ಹಾಗೂ ನಮ್ಮ ಸಂಸ್ಕೃತಿಯ ಪರಿಚಯ ಮಾಡಿಸುವ ಉದ್ದೇಶ ಹೊಂದಲಾಗಿದೆ ಎಂದು ತಿಳಿಸಿದರು.

ಕಲ್ಯಾಣೋತ್ಸವಕ್ಕೆ ಆಗಮಿಸಿದ್ದ ಸದ್ಭಕ್ತರು ಸಹ ಸಂಪ್ರದಾಯದ ಉಡುಗೆಯಲ್ಲಿ ಗಮನ ಸೆಳೆದರು. ಪುರುಷರು ಹಣೆಗೆ ವಿಭೂತಿ ಧರಿಸಿ, ತಲೆಗೆ ರಟ್ಟಿನ ಟೊಪ್ಪಿಗೆ, ರುಮಾಲು ಸುತ್ತಿಕೊಂಡಿದ್ದರೆ, ಮಹಿಳೆಯರು ತಲೆಗೆ ಹೂ ಮುಡಿದು, ಜರತಾರಿ ರೇಷ್ಮೆ ಸೀರೆ ಧರಿಸಿ, ಬಂಗಾರದ ಆಭರಣಗಳಿಂದ ಸಿಂಗಾರಗೊಂಡಿದ್ದರು.

ಇದರಿಂದ ಇಡೀ ಸಮಾರಂಭಕ್ಕೆ ಗ್ರಾಮೀಣ ಮದುವೆಯ ಸಾಂಪ್ರದಾಯಿಕ ಮೆರುಗು ಮತ್ತಷ್ಟು ಹೆಚ್ಚಿತು.

ಪುರಾಣದಲ್ಲಿ ಕೇಳಿಬಂದ ವಿವಾಹ ಪ್ರಸಂಗಕ್ಕೆ ಜಕ್ಕಲಿಯ ಭಕ್ತರು ಜೀವಂತ ರೂಪ ನೀಡಿದಂತಾಗಿತ್ತು. ಮೂರ್ತಿಗಳ ಕಲ್ಯಾಣವಾದರೂ ಸಂಭ್ರಮಿಸಿದ್ದು ಇಡೀ ಊರು; ಬಂಧುಗಳಾದದ್ದು ಇಡೀ ಗ್ರಾಮ.

ಭಕ್ತಿ, ಸೌಹಾರ್ದ, ಸಾಮರಸ್ಯ ಹಾಗೂ ಗ್ರಾಮೀಣ ಪರಂಪರೆಯ ಸೊಗಡಿನಿಂದ ಕೂಡಿದ್ದ ಶರಣಬಸವೇಶ್ವರ-ಮಾದಮ್ಮ ಕಲ್ಯಾಣೋತ್ಸವವು ಜಕ್ಕಲಿಯ ಜನಮನದಲ್ಲಿ ಬಹುಕಾಲ ನೆನಪಾಗಿ ಉಳಿಯುವ ಅಪರೂಪದ ಸಮಾರಂಭವಾಗಿ ಮೂಡಿಬಂದಿತು.

# ಗೃಹಸ್ಥ ಜೀವನ ಕರ್ತವ್ಯವಲ್ಲ; ಧರ್ಮ–ಸೇವೆಯ ಸಾಧನೆಯ ಮಾರ್ಗ

**ಸತ್ಯಮಿಥ್ಯ ಸುದ್ದಿಮೂಲ ನರೇಗಲ್ಲ :**

ಸಂಸಾರದಲ್ಲಿದ್ದುಕೊಂಡೇ ಸದ್ಗತಿ ಕಾಣಬಹುದು. ಗೃಹಸ್ಥ ಜೀವನವು ಧರ್ಮ, ಸಮಾಜ ಸೇವೆ ಹಾಗೂ ಸದಾಚಾರಕ್ಕೆ ಅಡ್ಡಿಯಲ್ಲ. ಕುಟುಂಬದ ಜವಾಬ್ದಾರಿಗಳನ್ನು ಸಮರ್ಥವಾಗಿ ನಿರ್ವಹಿಸುತ್ತಲೇ ಧರ್ಮ, ಸಮಾಜ ಹಾಗೂ ಮಾನವೀಯ ಮೌಲ್ಯಗಳಿಗೆ ಕೊಡುಗೆ ನೀಡುವುದು ಆದರ್ಶ ಬದುಕಿನ ಲಕ್ಷಣ ಎಂದು ಗದುಗಿನ ವೀರೇಶ್ವರ ಪುಣ್ಯಾಶ್ರಮದ ಪ್ರವಚನ ಪ್ರವೀಣ ಪಂ. ವೇ.ಮೂ. ಗುರುಸಿದ್ದೇಶ್ವರ ಶಾಸ್ತ್ರೀಗಳು ಹೇಳಿದರು.

ಸಮೀಪದ ಜಕ್ಕಲಿ ಗ್ರಾಮದ ಹಾಲಕೆರೆ ಶಾಖಾ ಅನ್ನದಾನೇಶ್ವರ ಶ್ರೀಮಠದಲ್ಲಿ ದಸರಾ ಮಹೋತ್ಸವದ ಅಂಗವಾಗಿ ತಿಂಗಳ ಪರ್ಯಂತ ನಡೆಯುತ್ತಿರುವ ಮಹಾದಾಸೋಹಿ ಕಲಬುರ್ಗಿ ಶರಣಬಸವೇಶ್ವರ ಪುರಾಣ ಪ್ರವಚನದಲ್ಲಿ ಬುಧವಾರ ರಾತ್ರಿ ಅವರು ಮಾತನಾಡಿದರು.

ಸಂಸಾರದ ತೊಡಕು-ತಾಪತ್ರಯಗಳಿಗೆ ಹೆದರಿ ಸನ್ಯಾಸ ಸ್ವೀಕರಿಸುವ ಬದಲು, ಗೃಹಸ್ಥಾಶ್ರಮದಲ್ಲಿಯೇ ಇದ್ದು ಕರ್ತವ್ಯವನ್ನು ಪ್ರಾಮಾಣಿಕವಾಗಿ ನಿರ್ವಹಿಸಬೇಕು. ಸಂಸಾರದಲ್ಲಿ ಬದುಕುತ್ತಲೇ ಅದರ ಮೋಹಕ್ಕೆ ಅಂಟಿಕೊಳ್ಳದೆ, ಕುಟುಂಬ, ಸಮಾಜ ಮತ್ತು ಧರ್ಮದ ಹೊಣೆಗಾರಿಕೆಗಳನ್ನು ಸಮತೋಲನದಿಂದ ನಿಭಾಯಿಸುವುದೇ ನಿಜವಾದ ಸಾಧನೆ ಎಂದು ಹೇಳಿದರು.

ಶಿವ–ಪಾರ್ವತಿ, ವಿಷ್ಣು-ಲಕ್ಷ್ಮೀ ಸೇರಿದಂತೆ ದೇವತೆಗಳು ಹಾಗೂ ಬಸವಾದಿ ಶಿವಶರಣರು ಗೃಹಸ್ಥರಾಗಿದ್ದುಕೊಂಡೇ ಧರ್ಮ ಮತ್ತು ಸಮಾಜ ಸೇವೆ ಮಾಡಿದ್ದಾರೆ. ಆದ್ದರಿಂದ ಸಂಸಾರ ತೊರೆಯುವುದೇ ಮುಕ್ತಿಮಾರ್ಗವಲ್ಲ. ಜೀವನದಲ್ಲಿ ದೊರೆತ ಎಲ್ಲವನ್ನೂ ಶಿವನ ಕೊಡುಗೆ ಎಂಬ ಭಾವನೆಯಿಂದ ಸ್ವೀಕರಿಸಿ, ಕರ್ತವ್ಯವನ್ನೇ ಸೇವೆಯೆಂದು ಪರಿಗಣಿಸಿ ಬದುಕಬೇಕು ಎಂದು ತಿಳಿಸಿದರು.

ಶರಣಬಸವೇಶ್ವರರು ಸನ್ಯಾಸಿಯಾಗುವ ಬಯಕೆ ವ್ಯಕ್ತಪಡಿಸಿದಾಗ, ಗುರುಗಳು ಗೃಹಸ್ಥಾಶ್ರಮದ ಮಹತ್ವವನ್ನು ತಿಳಿಸಿ, ತಾಯಿ-ತಂದೆಯರ ಋಣ ತೀರಿಸುವುದರ ಜತೆಗೆ ಸಮಾಜ ಸೇವೆ ಹಾಗೂ ಧರ್ಮೋದ್ಧಾರದಲ್ಲಿ ತೊಡಗುವಂತೆ ಬೋಧಿಸಿದ ಪ್ರಸಂಗವನ್ನು ಶಾಸ್ತ್ರೀಗಳು ಮನೋಜ್ಞವಾಗಿ ವಿವರಿಸಿದರು.

ಗುರುವಿನ ಆಜ್ಞೆಯಂತೆ ಶರಣಬಸವೇಶ್ವರರು ವಿವಾಹಕ್ಕೆ ಒಪ್ಪಿದ ಬಳಿಕ, ಅವರಿಗೆ ಯೋಗ್ಯವಾದ ಕನ್ಯೆಯನ್ನು ಹುಡುಕುವ ಜವಾಬ್ದಾರಿಯನ್ನೂ ಗುರುಗಳೇ ಹೊತ್ತರು. ಗುಣ, ಸಂಸ್ಕಾರ, ನಡವಳಿಕೆ ಹಾಗೂ ಕುಟುಂಬದ ಹಿನ್ನೆಲೆಯನ್ನು ಪರಿಗಣಿಸಿ ಅಫಜಲಪುರ ತಾಲ್ಲೂಕಿನ ಮಾಶಾಳ ಗ್ರಾಮದ ಶಾಂತಲಿಂಗಪ್ಪನವರ ಪುತ್ರಿ ಮಾದಮ್ಮಳನ್ನು ವಧುವಾಗಿ ಆಯ್ಕೆ ಮಾಡಿದ ಪ್ರಸಂಗವನ್ನು ನಿರೂಪಿಸಿದರು.

ವಿವಾಹ ಮಾತುಕತೆಯಲ್ಲಿ ವರದಕ್ಷಿಣೆ ಸೇರಿದಂತೆ ಯಾವುದೇ ಬೇಡಿಕೆಗಳಿಗೆ ಅವಕಾಶ ನೀಡದೆ, ಎರಡೂ ಕುಟುಂಬಗಳ ಪ್ರೀತಿ, ವಿಶ್ವಾಸ ಹಾಗೂ ಒಪ್ಪಿಗೆಯ ಆಧಾರದ ಮೇಲೆ ಸಂಬಂಧ ಕುದುರಿದ ವಿಚಾರವನ್ನು ವಿವರಿಸಿದ ಅವರು, ಇಂದಿನ ಆಡಂಬರದ ಮದುವೆಗಳಿಗೆ ಹೋಲಿಸಿದರೆ ಅಂದಿನ ವಿವಾಹ ಪದ್ಧತಿಯಲ್ಲಿದ್ದ ಸರಳತೆ, ಸಂಸ್ಕಾರ ಮತ್ತು ಕುಟುಂಬ ಬಾಂಧವ್ಯಗಳು ಸಮಾಜಕ್ಕೆ ಮಾದರಿಯಾಗಿವೆ ಎಂದರು.

ಕಲ್ಯಾಣೋತ್ಸವದಲ್ಲಿ ಬಂಧು-ಬಳಗದ ಆಗಮನ, ಊರಿನ ಜನರ ಪಾಲ್ಗೊಳ್ಳುವಿಕೆ, ಮದುವೆ ಮನೆಯ ಸಂಭ್ರಮ ಸೇರಿದಂತೆ ಅಂದಿನ ಗ್ರಾಮೀಣ ವಿವಾಹ ಸಂಪ್ರದಾಯವನ್ನು ತಮ್ಮ ನಿರೂಪಣೆಯ ಮೂಲಕ ಶಾಸ್ತ್ರೀಗಳು ಕಣ್ಣಿಗೆ ಕಟ್ಟುವಂತೆ ಕಟ್ಟಿಕೊಟ್ಟರು. ಪುರಾಣದ ಪ್ರಸಂಗದ ಜತೆಗೆ ಅಂದಿನ ಸಾಮಾಜಿಕ ಜೀವನದ ಚಿತ್ರಣವನ್ನೂ ಪ್ರೇಕ್ಷಕರ ಮುಂದಿಟ್ಟರು.

ಆಕಾಶವಾಣಿ ಕಲಾವಿದ ಸುರೇಶ ಬೆನಕಟ್ಟಿ ತಬಲಾ ಸಾಥ್ ನೀಡಿದರು. ಈ ವೇಳೆ ಶೇಖಣ್ಣವರ ಮೇಟಿ, ಶಿವನಾಗಪ್ಪ ದೊಡ್ಡಮೇಟಿ, ವೀರಯ್ಯ ಹಿರೇಮಠ, ಗುರುಲಿಂಗಮೂರ್ತಿ ಮಂಟಯ್ಯನವರಮಠ, ಉಮೇಶ ಕೊಪ್ಪದ, ಸುಭಾಸ ಕಡಗದ, ಎಂ.ಎಂ. ಮೇಟಿ, ಈಶ್ವರಪ್ಪ ಇಟಗಿ, ಪ್ರಕಾಶಪ್ಪ ಹೊಸಮನಿ, ಶರಣಯ್ಯ ಹಿರೇಮಠ, ಪ್ರಕಾಶ ವಾಲಿ, ವೀರಣ್ಣ ಹಿರೇಮಠ, ಶಿವಪ್ಪ ತಿಪರಡ್ಡಿ, ಎಫ್.ಎಂ. ರಂಗಣ್ಣವರ, ಬಸಪ್ಪ ಕೊಪ್ಪದ, ಮಲ್ಲಿಕಾರ್ಜುನ ಕುರುಡಗಿ, ಪುಂಡಪ್ಪ ಮಡಿವಾಳರ ಸೇರಿದಂತೆ ಹಲವರು ಉಪಸ್ಥಿತರಿದ್ದರು.



# ಹೊಸರಿತ್ತಿಯಲ್ಲಿ ದಸರಾ ಮಹೋತ್ಸವ ಅ.11 ರಿಂದ

**ಗುತ್ತಲ:** ಸಮೀಪದ ಹೊಸರಿತ್ತಿ ಗ್ರಾಮದ ಶ್ರೀಗ್ರಾಮದೇವತಾ ದೇವಸ್ಥಾನದಲ್ಲಿ ಪ್ರತಿ ವರ್ಷದ ಪದ್ದತಿಯಂತೆ ಈ ವರ್ಷವೂ ಸಹ ಶರನ್ನನವರಾತ್ರಿ ದಸರಾ ಮಹೋತ್ಸವ ಕಾರ್ಯಕ್ರಮವು ಅ.11 ರಿಂದ 21 ವರಗೆ ಜರುಗಲಿದೆ. ಈ ವರ್ಷ ವಿಶೇಷವಾಗಿ 10 ದಿನಗಳಕಾಲ ಕಾರ್ಯಕ್ರಮ ಆಯೋಜಿಸಲಾಗಿದೆ. ಪ್ರತಿದಿನ ರಾತ್ರಿ 7ರಿಂದ ಶ್ರೀದೇವಿ ಮಹಾತ್ಮೆ ಪುರಾಣ ಪ್ರವಚನ ಕಾರ್ಯಕ್ರಮವು ಮಾದನ ಹಿಪ್ಪರಗಿಯ ಗುರುಶಾಂತೇಶ್ವರ ಹಿರೇಮಠದ ಪೂಜ್ಯ ಶಾಂತವೀರ ಶಿವಾಚಾರ್ಯ ಸ್ವಾಮೀಜಿ ನುಡಿಯವರು, ದಯಾನಂದ ಜೇವರ್ಗಿ ಸಂಗೀತಕ್ಕೆ ಮುತ್ತು ಪಿ.ವಜ್ಜಲ್ ತಬಲಾಸಾಥ್ ನೀಡುವರು. ಇನ್ನೂ ಅ.11 ರವಿವಾರ ಬೆ.8ಕ್ಕೆ ಶ್ರೀ ಗ್ರಾಮದೇವಿಗೆ ಪಂಚಾಮೃತ ಅಭಿಷೇಕ ಹಾಗೂ ಘಟಸ್ಥಾಪನೆ ನೇರವೇರುವುದು. ರಾತ್ರಿ 7ಕ್ಕೆ ಶ್ರೀದೇವಿಮಹಾತ್ಮೆ ಪುರಾಣ ಪ್ರವಚನ ಕಾರ್ಯಕ್ರಮ ಉದ್ಘಾಟನಾ ಕಾರ್ಯಕ್ರಮ ಜರಗುವುದು. ಸ್ಥಳೀಯ ಗುದ್ದಲೀಶ್ವರಮಠದ ಪೂಜ್ಯ ಗುದ್ದಲೀಶ್ವರ ಸ್ವಾಮೀಜಿ, ಶಿರಹಟ್ಟಿ ಭಾವ್ಯಕ್ಯತಾ ಸಂಸ್ಥಾನ ಮಠದ ಪೂಜ್ಯ ಫಕ್ಕೀರ ದಿಂಗಾಲೇಶ್ವರ ಸ್ವಾಮೀಜಿ ಸಾನ್ನಿಧ್ಯ ವಹಿಸುವರು, ಜವಳಿ ಮತ್ತು ಸಕ್ಕರೆ ಸಚಿವ ರುದ್ರಪ್ಪ ಲಮಾಣಿ ಕಾರ್ಯಕ್ರಮಕ್ಕೆ ಚಾಲನೆ ನೀಡವರು, ದಿ.12 ರಂದು ಅಗಡಿ ಅಕ್ಕಿಮಠದ ಪೂಜ್ಯ ಗುರುಲಿಂಗ ಸ್ವಾಮೀಜಿ. ದಿ.13 ರಂದು ನರಸೀಪುರದ ಅಂಬಿಗರ ಗುರುಪೀಠದ ಪೂಜ್ಯ ಶಾಂತಭೀಷ್ಮ ಚೌಡಯ್ಯ ಸ್ವಾಮೀಜಿ , ದಿ.14 ರಂದು ಲಿಂಗನಾಯಕಹಳ್ಳಿ ಯ ಚನ್ನವೀರ ಸ್ವಾಮೀಜಿ, ದಿ.15 ರಂದು ಬಂಕಾಪುರ ಕೆಂಡದ ಸ್ವಾಮಿಮಠದ ಪೂಜ್ಯ ಸಿದ್ದಯ್ಯ ಸ್ವಾಮೀಜಿ, ದಿ.16 ರಂದು ನೆಗಳೂರ ಸಂಸ್ಥಾನ ಹಿರೇಮಠದ ಪೂಜ್ಯ ಗುರುಶಾಂತೇಶ್ವರ ಶಿವಾಚಾರ್ಯ ಸ್ವಾಮೀಜಿ , ದಿ.17ರಂದು ವರವಿಯ ಮೌನೇಶ್ವರ ಮಠದ ಪೂಜ್ಯ ಮೌನೇಶ್ವರ ಸ್ವಾಮೀಜಿ , ದಿ.18 ರಂದು ಹಾವೇರಿ ಹುಕ್ಕೇರಿ ಮಠದ ಪೂಜ್ಯ ಸದಾಶಿವ ಸ್ವಾಮೀಜಿ, ದಿ.20ರಂದು ಹೂವಿನ ಶಿಗ್ಲಿ ವಿರಕ್ತಮಠದ ಪೂಜ್ಯ ಚನ್ನವೀರ ಸ್ವಾಮೀಜಿ ಕಾರ್ಯಕ್ರಮದ ಸಾನ್ನಿಧ್ಯವಹಿಸವರು. ಸುಮಂಗಲೆಯರಿಗೆ ಉಡಿ ತುಂಬುವ ಕಾರ್ಯಕ್ರಮ ಜರಗುವುದು, ಹೊಸರಿತ್ತಿ, ಅಕ್ಕೂರ, ಚನ್ನೂರ, ಕೊರಡೂರ, ಹಳೇರಿತ್ತಿ, ಹಂದಿಗನೂರ, ಶಿರಮಾಪುರ ಗ್ರಾಮದ ಸದ್ಭಕ್ತರಿಂದ ದೇವಿ ಪುರಾಣ ಗ್ರಂಥಕ್ಕೆ ಪೂಜೆ ಸಲ್ಲಿಸುವರು. ದಿ.21 ರಂದು ಬೆ.10ಕ್ಕೆ ದೇವಿಯ ಭಾವಚಿತ್ರದ ಮೇರವಣಿಗೆ ಪೂರ್ಣಕುಂಭ, ಕಳಸ,ಆರತಿ, ಸಕಲ ಜಾನಪದಕಲಾಮೇಳಗಳೊಂದಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಅದ್ದೂರಿ ಮೇರವಣಿಗೆ ಜರುಗುವುದು. ಸಂಜೆ 6ಕ್ಕೆ ಪುರಾಣ ಮಂಗಲ , ಹಾಗೂ ವಿಜಯದಶಮಿ ಬನ್ನಿ ವಿನಿಮಯ ಕಾರ್ಯಕ್ರಮ ಜರಗುವುದು. ಪ್ರತಿನಿತ್ಯ ಅನ್ನ ಸಂತರ್ಪಣೆ, ಸಾಂಸ್ಕೃತಿಕ ಕಾರ್ಯಕ್ರಮಗಳು ಜರಗುವವು ಎಂದು ಪುರಾಣ ಸೇವಾಸಮಿತಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಜಯ ಸಂಕಲ್ಪ ಯಾತ್ರೆ: ನರೇಗಲ್ಲದಲ್ಲಿ ವಿಜಯೇಂದ್ರಗೆ ಭವ್ಯ ಸ್ವಾಗತ

**ಸತ್ಯಮಿಥ್ಯ ಸುದ್ದಿಮೂಲ ನರೇಗಲ್ಲ :**

ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಬುಧವಾರ 'ವಿಜಯ ಸಂಕಲ್ಪ ಯಾತ್ರೆ' ಅಂಗವಾಗಿ ಗದಗದಿಂದ ಗಜೇಂದ್ರಗಡಕ್ಕೆ ತೆರಳುತ್ತಿದ್ದ ಸಂದರ್ಭದಲ್ಲಿ ನರೇಗಲ್ಲ ಪಟ್ಟಣದಲ್ಲಿ ಬಿಜೆಪಿ ಕಾರ್ಯಕರ್ತರು ಭವ್ಯ ಸ್ವಾಗತ ನೀಡಿದರು.



ಪಟ್ಟಣದ ಪೊಲೀಸ್ ಠಾಣೆ ಬಳಿಯಲ್ಲಿ ಜಮಾಯಿಸಿದ್ದ ಪಕ್ಷದ ಕಾರ್ಯಕರ್ತರು ಜಯಘೋಷ ಮೊಳಗಿಸಿ, ವಿಜಯೇಂದ್ರ ಅವರಿಗೆ ಹೂಮಾಲೆ ಹಾಕಿ ಆತ್ಮೀಯವಾಗಿ ಬರಮಾಡಿಕೊಂಡರು.

ಈ ಸಂದರ್ಭದಲ್ಲಿ ಬಿಜೆಪಿ ಮುಖಂಡರಾದ ಅನಿಲ್ ಮೆಣಸಿನಕಾಯಿ, ರವಿ ದಂಡಿನ, ಉಮೇಶ ಚನ್ನು ಪಾಟೀಲ, ವೆಂಕಟೇಶ ಕುಲಕರ್ಣಿ, ಮುತ್ತಣ್ಣ ಲಿಂಗನಗೌಡ್ರ, ಬಸವರಾಜ ವಂಕಲಕುಂಟಿ, ಶರಣಪ್ಪ ಕಲಾಲಬಂಡಿ, ರುದ್ರೇಶ ಕೋಟಗಿ, ಹಾಲಪ್ಪ ಹಾಲಗೇರಿ, ಮಲ್ಲಪ್ಪ ಹಕಾರಿ, ಶರಣಪ್ಪ ಕಾಟಿ, ಸಿದ್ದಪ್ಪ ರಾಗಿ, ಶಿವಕುಮಾರ ದೊಡ್ಡೂರ, ಕಳಕಪ್ಪ ಸರ್ವಿ, ಚನ್ನಮಲ್ಲಪ್ಪ ಹೊಂಬಳ, ಚಂದ್ರು ಕುರಿ, ಅರುಣಕುಮಾರ ಮಠದ, ರಾಘು ಕರಡಿಮಠ, ರವಿ ಕೋಣನವರ, ಆನಂದ ಕಡೇತೋಟ, ಮಲ್ಲು ಅಂಗಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಮಾರನಬಸರಿಯಲ್ಲಿ ಅ. 12ರಿಂದ ಏಳು ದಿನಗಳ ಎನ್‌ಎಸ್‌ಎಸ್ ಶಿಬಿರ

**ಸತ್ಯಮಿಥ್ಯ ಸುದ್ದಿಮೂಲ ನರೇಗಲ್ಲ :**

ನರೇಗಲ್ಲದ ಅನ್ನದಾನೇಶ್ವರ ಪದವಿಪೂರ್ವ ಮಹಾವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ಘಟಕದ ವತಿಯಿಂದ ಸಮೀಪದ ಮಾರನಬಸರಿ ಗ್ರಾಮದಲ್ಲಿ ಅ.12ರಿಂದ 18ರವರೆಗೆ ಏಳು ದಿನಗಳ ಎನ್‌ಎಸ್‌ಎಸ್ ಶಿಬಿರ ಆಯೋಜಿಸಲಾಗಿದೆ.

ಶಿಬಿರದ ಉದ್ಘಾಟನಾ ಸಮಾರಂಭ ಅ.12ರಂದು ಸಂಜೆ 6 ಗಂ–ಟೆಗೆ ನಡೆಯಲಿದ್ದು, ಹಾಲಕೆರೆ ಸಂಸ್ಥಾನಮಠದ ಪರಮಪೂಜ್ಯ ಜಗದ್ಗುರು ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು ದಿವ್ಯಸಾನ್ನಿಧ್ಯ ವಹಿಸಲಿದ್ದಾರೆ. ಎಸ್.ಎ.ಪಿ.ಯು. ಕಾಲೇಜಿನ ಆಡಳಿತ ಮಂಡಳಿ ಚೇರ್ಮನ್ ರವೀಂದ್ರನಾಥ ದೊಡ್ಡಮೇಟಿ ಅಧ್ಯಕ್ಷತೆ ವಹಿಸಲಿದ್ದಾರೆ.

ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ) ಬೆಂಗಳೂರು ಉಪನಿರ್ದೇಶಕ ಸಿದ್ದಲಿಂಗ ಬಂಡು ಮಸನಾಯಕ, ಎಸ್.ಎ.ವಿ.ವಿ.ಪಿ. ಸಮಿತಿ ಆಡಳಿತಾಧಿಕಾರಿ ಡಾ. ಜಿ.ಕೆ. ಕಾಳೆ, ಕಾಲೇಜು ಆಡಳಿತ ಮಂಡಳಿ ಚೇರ್ಮನ್ ಮಹಾಂತೇಶ ಸೋಮನಕಟ್ಟಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಶರಣಪ್ಪ ಬಿ. ನರೇಗಲ್ಲ, ಕಾಲೇಜಿನ ಪ್ರಾಚಾರ್ಯ ವೈ.ಸಿ. ಪಾಟೀಲ ಹಾಗೂ ಗದಗ ಎಸ್.ಎ. ಪದವಿಪೂರ್ವ ಕಾಲೇಜಿನ ಪ್ರಾಚಾರ್ಯ ವಿದ್ಯಾಸಾಗರ ಸೇರಿದಂತೆ ಗಣ್ಯರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಏಳು ದಿನಗಳ ಶಿಬಿರದಲ್ಲಿ ವಿದ್ಯಾರ್ಥಿಗಳಲ್ಲಿ ಸೇವಾ ಮನೋಭಾವ, ಸಾಮಾಜಿಕ ಜವಾಬ್ದಾರಿ ಹಾಗೂ ಶಿಸ್ತು ಬೆಳೆಸುವುದರ ಜತೆಗೆ ಗ್ರಾಮ ಸ್ವಚ್ಛತೆ, ಪರಿಸರ ಜಾಗೃತಿ, ಸಾಮಾಜಿಕ ಅರಿವು ಸೇರಿದಂತೆ ವಿವಿಧ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುವುದು. ಗ್ರಾಮೀಣ ಬದುಕಿನ ವಾಸ್ತವತೆ ಹಾಗೂ ಸಾಮಾಜಿಕ ಸಮಸ್ಯೆಗಳ ಕುರಿತು ವಿದ್ಯಾರ್ಥಿಗಳಿಗೆ ಅರಿವು ಮೂಡಿಸುವ ಕಾರ್ಯಕ್ರಮಗಳೂ ನಡೆಯಲಿವೆ.

ಈ ಕುರಿತು ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಎಂ.ಎಸ್. ಹೊನ್ನವಾಡ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಪಿ. ಶೇಷಾದ್ರಿ ನಿರ್ದೇಶನದ 'ಪಂಚಾಯಿತಿ' ಚಿತ್ರದಲ್ಲಿ ಯೂಟ್ಯೂಬರ್‌ಗಳಿಗೆ ಅವಕಾಶ**

# ಉತ್ತರ ಕರ್ನಾಟಕದ ಕಲಾವಿದರನ್ನೊಳಗೊಂಡ ವಿಶಿಷ್ಟ ಪ್ರಯೋಗ

**ಸತ್ಯಮಿಥ್ಯ ಸಿನಿಮೂಲ ಬೆಂಗಳೂರು:**

ರಾಷ್ಟ್ರಪ್ರಶಸ್ತಿ ವಿಜೇತ ಹಿರಿಯ ನಿರ್ದೇಶಕ ಪಿ. ಶೇಷಾದ್ರಿ ಅವರು ತಮ್ಮ 14ನೇ ಸಿನಿಮಾವಾದ 'ಪಂಚಾಯಿತಿ'ಯಲ್ಲಿ ಹೊಸ ಪ್ರಯೋಗಕ್ಕೆ ಮುಂದಾಗಿದ್ದಾರೆ. 'ನೇಟಿವ್ ಕ್ರಿಯೇಷನ್ಸ್' ಅಡಿಯಲ್ಲಿ ತಯಾರಾಗುತ್ತಿರುವ ಈ ಚಿತ್ರದಲ್ಲಿ, ಯೂಟ್ಯೂಬ್‌ನಲ್ಲಿ ಸಹಸ್ರಾರು ಪ್ರೇಕ್ಷಕ ಬಳಗವನ್ನು ಹೊಂದಿರುವ ಪ್ರತಿಭಾವಂತ ಕಲಾವಿದರಿಗೆ ಪ್ರಮುಖ ಪಾತ್ರಗಳನ್ನು ನೀಡಲಾಗಿದೆ.



ಯೂಟ್ಯೂಬ್‌ನಲ್ಲಿ ಜನಪ್ರಿಯರಾದ ಗೋಕುಲ್ ರಾಜ್, ಜಗದೀಶ್ ಮೂಕಿ, ಪ್ರಕಾಶ ರಾಜಕುಮಾರ್, ಶ್ರುತಿ ಹೇಮಂತ್, ಬಿಂದು ಹಾಗೂ ವೀರಣ್ಣ ಹೊಸಮನಿ ಸೇರಿದಂತೆ ಹಲವು ಕಲಾವಿದರು ಈ ಚಿತ್ರದಲ್ಲಿ ಅಭಿನಯಿಸಿದ್ದಾರೆ. ಸಿನಿಮಾದ ಎಲ್ಲ ಪಾತ್ರಗಳಿಗೂ ಉತ್ತರ ಕರ್ನಾಟಕದ ಕಲಾವಿದರನ್ನೇ ಬಳಸಿಕೊಂಡಿರುವುದು ಈ ಚಿತ್ರದ ಮತ್ತೊಂದು ವಿಶೇಷತೆಯಾಗಿದೆ.



ಈ ಕುರಿತು ಮಾತನಾಡಿರುವ ಪಿ. ಶೇಷಾದ್ರಿ, "ಉತ್ತರ ಕರ್ನಾಟಕದ ಭಾಷೆ ಮತ್ತು ಇಲ್ಲಿನ ಸೊಗಡು ನನಗೆ ಬಹಳ ಇಷ್ಟ. ಹನ್ನೆರಡು ವರ್ಷಗಳ ಹಿಂದೆ 'ಡಿಸೆಂಬರ್–1' ಚಿತ್ರವನ್ನು ಇಲ್ಲಿಯ ಪ್ರಾದೇಶಿಕತೆ ಅಳವಡಿಸಿ ಮಾಡಿದ್ದೆ. ಆ ಚಿತ್ರಕ್ಕೆ ಎರಡು ರಾಷ್ಟ್ರಪ್ರಶಸ್ತಿಗಳು ಬಂದಿದ್ದವು. ಇಲ್ಲಿನ ಜನರ ಆತ್ಮೀಯತೆ ನನ್ನನ್ನು ಮತ್ತೆ ಇಲ್ಲಿಗೆ ಕರೆತಂದಿದೆ" ಎಂದು ತಿಳಿಸಿದ್ದಾರೆ.

**ನಿಜ ಜೀವನದ 'ದೀಪಾ ಜೋಗತಿ' ಅಭಿನಯ:** ಚಿತ್ರದ ಮತ್ತೊಂದು ವಿಶೇಷವೆಂದರೆ, ರಾಯಚೂರು ಮೂಲದ ನಿಜ ಜೀವನದ ಜೋಗತಿ 'ದೀಪಾ ಜೋಗತಿ' ಅವರು ಪ್ರಮುಖ ಪಾತ್ರವೊಂದರಲ್ಲಿ ಅಭಿನಯಿಸಿದ್ದಾರೆ. ಸಮಾಜದ ಅಂಚಿನಲ್ಲಿ ಬದುಕುತ್ತಿರುವ ಜೋಗತಿ ಸಮುದಾಯದ ಪ್ರತಿನಿಧಿಯಾಗಿ ಕಾಣಿಸಿಕೊಂಡಿರುವ ಇವರು, ಚಿತ್ರಕ್ಕಾಗಿ ಜನಪದ ಸೊಗಡಿನ ಹಾಡೊಂದನ್ನೂ ಹಾಡಿದ್ದಾರೆ.

ಹುಬ್ಬಳ್ಳಿ, ಧಾರವಾಡ, ಶಿವಳ್ಳಿ, ಕುಂದಗೋಳ, ಹೆಬ್ಬಳ್ಳಿ ಹಾಗೂ ಬೂದನಗುಡ್ಡ ಸೇರಿದಂತೆ ಉತ್ತರ ಕರ್ನಾಟಕದ ವಿವಿಧ ಸುಂದರ ತಾಣಗಳಲ್ಲಿ ಒಂದೇ ಹಂತದಲ್ಲಿ ಚಿತ್ರೀಕರಣ ಪೂರ್ಣಗೊಳಿಸಲಾಗಿದೆ. ಪ್ರಸ್ತುತ ಚಿತ್ರದ ಸಂಕಲನ ಕಾರ್ಯ ಮುಕ್ತಾಯಗೊಂಡಿದ್ದು, ಸಂಗೀತ ಜೋಡಣೆ, ಶಬ್ದವಿನ್ಯಾಸ ಹಾಗೂ ಪೋಸ್ಟ್ ಪ್ರೊಡಕ್ಷನ್ ಕೆಲಸಗಳು ನಡೆಯುತ್ತಿವೆ.

**ತಾಂತ್ರಿಕ ವರ್ಗ ಹಾಗೂ ತಾರಾಗಣ:** ಚಿತ್ರದ ತಾರಾಗಣದಲ್ಲಿ ಶ್ರುತಿ ಬಿಸರಹಳ್ಳಿ, ಬಸವರಾಜ್ ತಿರ್ಲಾಪುರ ಮೊದಲಾದವರಿದ್ದಾರೆ. ದೊಡ್ಡನಾಗಯ್ಯ ಈ ಚಿತ್ರದ ನಿರ್ಮಾಪಕರಾಗಿದ್ದು, ಪಿ. ಶೇಷಾದ್ರಿ ಅವರು ಚಿತ್ರಕಥೆ ಬರೆದು ನಿರ್ದೇಶನ ಮಾಡಿದ್ದಾರೆ. ಅರವಿಂದ ಮಿತ್ರ ಅವರ ಕಥೆ, ಗುರುಪ್ರಸಾದ್ ಕಾಶಿ ಅವರ ಛಾಯಾಗ್ರಹಣ, ಶಿವಾ ಅವರ ಸಂಗೀತ ಹಾಗೂ ಬಿ.ಎಸ್. ಕೆಂಪರಾಜ್ ಅವರ ಸಂಕಲನ ಚಿತ್ರಕ್ಕಿದೆ.

ಟಿ.ಆರ್.ಪ್ರಭು, ವಿದ್ಯಾಶ್ರೀ ಮತ್ತು ಪ್ರಕಾಶ್‌ರಾಜಕುಮಾರ್ ಸಹ–ನಿರ್ದೇಶಕರಾಗಿ ಕಾರ್ಯನಿರ್ವಹಿಸಿದ್ದು, ರವಿಶಂಕರ್ ನಿರ್ಮಾಣ ನಿರ್ವಹಣೆಯ ಜವಾಬ್ದಾರಿ ಹೊತ್ತಿದ್ದಾರೆ. ಡಾ. ಪ್ರಭು ಗಂಜಿಹಾಳ ಹಾಗೂ ಡಾ. ವೀರೇಶ್ ಹಂಡಿಗಿ ಅವರು ಪಿ.ಆರ್.ಓ ಆಗಿ ಕಾರ್ಯನಿರ್ವಹಿಸುತ್ತಿದ್ದಾರೆ.

SATY MITHI
Kannada Daily Morning



# ಮೈಸೂರು ದಸರಾ ಪರಂಪರೆ, ಇತಿಹಾಸ ಮತ್ತು ಗತವೈಭವ

**ದಸರೆಯ ಮಹತ್ವ:** ಭಾರತೀಯ ಹಬ್ಬಗಳು ಪೌರಾಣಿಕ ಹಾಗೂ ಐತಿಹಾಸಿಕ ಹಿನ್ನೆಲೆಯೊಂದಿಗೆ ಮಾನವೀಯ ಮೌಲ್ಯಗಳು ಮತ್ತು ಸಾಂಸ್ಕೃತಿಕ ಪರಂಪರೆಯನ್ನು ಮುಂದಿನ ಪೀಳಿಗೆಗೆ ತಲುಪಿಸುವ ಪ್ರಮುಖ ಮಾಧ್ಯಮಗಳಾಗಿವೆ. ಇಂದಿನ ಯುವ ಪೀಳಿಗೆಗೆ ಇದರ ಪರಿಚಯವನ್ನು ಮಾಡುವುದು ಅತೀ ಅಗತ್ಯ ಹಾಗೂ ಭಾರತೀಯರಿಗೆ ನಮ್ಮ ದೇಶದ ಸಾಂಸ್ಕೃತಿಕ ಶ್ರೀಮಂತಿಕೆ ಬಗ್ಗೆ ಹೆಮ್ಮೆಯನ್ನು ಹೊಂದುವಂತಹ ಒಂದು ಸುವರ್ಣಾವಕಾಶವಾಗಿದೆ.

"ದಸರಾ" ಭಾರತದ ಪ್ರಮುಖ ಪಾರಂಪರಿಕ ಹಬ್ಬಗಳಲ್ಲಿ ಒಂದಾಗಿದೆ. ನವರಾತ್ರಿ ಮತ್ತು ವಿಜಯದಶಮಿಯನ್ನು ಒಳಗೊಂಡ ಹತ್ತು ದಿನಗಳ ಈ ಉತ್ಸವವು ಪೌರಾಣಿಕ, ಐತಿಹಾಸಿಕ, ಸಾಂಸ್ಕೃತಿಕ ಹಾಗೂ ಧಾರ್ಮಿಕ ಮಹತ್ವವನ್ನು ಹೊಂದಿದೆ. ಮಾತ್ರವಲ್ಲ, ಅಂತರಾಷ್ಟ್ರೀಯ ಮಟ್ಟದಲ್ಲಿ "ಮೈಸೂರು ದಸರಾ" ಆಚರಣೆಯ ವೈಶಿಷ್ಟವನ್ನು ಗಮನಿಸಿ, 2008ರಲ್ಲಿ ಯುನೆಸ್ಕೋ ದಸರಾ ಆಚರಣೆಯ ಕಲಾಪ್ರಕಾರಗಳನ್ನು 'ಮಾನವೀಯತೆಯ ಅಮೂರ್ತ ಸಾಂಸ್ಕೃತಿಕ ಪರಂಪರೆ' ಎಂದು ಗುರುತಿಸಿದೆ.

ಶರದೃತುವಿನಲ್ಲಿ ಆಚರಿಸಲಾಗುವ ನವರಾತ್ರಿಯು ದೇವಿಯ ವಿವಿಧ ರೂಪಗಳ ಆರಾಧನೆಗೆ ಸಮರ್ಪಿತವಾಗಿದ್ದು, ವಿಜಯದಶಮಿಯನ್ನು ವಿಜಯದ ಸಂಕೇತವಾಗಿ ಆಚರಿಸಲಾಗುತ್ತದೆ. ದುಷ್ಟಶಕ್ತಿಯ ಮೇಲೆ ಸತ್ಕಾರ್ಯ ಮತ್ತು ಧರ್ಮದ ವಿಜಯವೇ ಇದರ ಪ್ರಮುಖ ಸಂದೇಶ. ದೇಶದ ವಿವಿಧ ಭಾಗಗಳಲ್ಲಿ ವಿಭಿನ್ನ ರೀತಿಯಲ್ಲಿ ದಸರಾ ಆಚರಿಸಲಾಗುತ್ತಿದ್ದರೂ, ಮೈಸೂರು ದಸರಾ ತನ್ನ ವಿಶಿಷ್ಟ ಪರಂಪರೆ, ರಾಜವೈಭವ ಮತ್ತು ಸಾಂಸ್ಕೃತಿಕ ಆಚರಣೆಗಳಿಂದ ವಿಶ್ವಪ್ರಸಿದ್ಧವಾಗಿದೆ.

**ನವರಾತ್ರಿ ಮತ್ತು ದೇವಿ ಆರಾಧನೆ:** ಪುರಾಣಗಳಲ್ಲಿ ಮಹಿಷಾಸುರನಂತಹ ಅಸುರ ಶಕ್ತಿಗಳ ವಿರುದ್ಧ ಚಾಮುಂಡೇಶ್ವರಿ ದೇವಿಯ ವಿಜಯದ ಕಥೆಗಳು ನವರಾತ್ರಿ ಆಚರಣೆಯೊಂದಿಗೆ ಸಂಬಂಧ ಹೊಂದಿವೆ. ಅಸುರರ ಸಂಹಾರದ ಮೂಲಕ ಧರ್ಮ ಮತ್ತು ಸತ್ಯದ ವಿಜಯವನ್ನು ಸಂಭ್ರಮಿಸಲಾಗುತ್ತದೆ. ಮೈಸೂರು ದಸರೆಯಲ್ಲಿ ಚಾಮುಂಡೇಶ್ವರಿ ದೇವಿಯ ಆರಾಧನೆಗೆ ವಿಶೇಷ ಸ್ಥಾನವಿದೆ.

ಪ್ರಕೃತಿಯನ್ನು ಮಾತೃಸ್ವರೂಪವಾಗಿ ಕಾಣುವ ಭಾರತೀಯ ಪರಂಪರೆಯಲ್ಲಿ ಶಕ್ತಿಯನ್ನು ಶೈಲಪುತ್ರೀ, ಬ್ರಹ್ಮಚಾರಿಣೀ, ಚಂದ್ರಘಂಟಾ, ಕೂಷ್ಮಾಂಡಾ, ಸ್ಕಂದಮಾತಾ, ಕಾತ್ಯಾಯನೀ, ಕಾಲರಾತ್ರಿ, ಮಹಾಗೌರಿ ಮತ್ತು ಸಿದ್ದಿಧಾತ್ರಿ ಎಂಬ ನವರೂಪಗಳಲ್ಲಿ ಆರಾಧಿಸಲಾಗುತ್ತದೆ.

ಘಟಸ್ಥಾಪನೆ, ದೇವಿ ಪೂಜೆ, ಸರಸ್ವತಿ ಪೂಜೆ, ದುರ್ಗಾಷ್ಟಮಿ, ಆಯುಧ ಪೂಜೆ ಹಾಗೂ ಇತರ ಧಾರ್ಮಿಕ ವಿಧಿವಿಧಾನಗಳು ಈ ಅವಧಿಯಲ್ಲಿ ನಡೆಯುತ್ತವೆ. ಹತ್ತನೆಯ ದಿನವಾದ ವಿಜಯದಶಮಿಯು ವಿಜಯಲಕ್ಷ್ಮೀ ಅಥವಾ ಅಪರಾಜಿತಾ ದೇವಿಯ ಆರಾಧನೆಯನ್ನು ನಡೆಸಲಾಗುತ್ತದೆ. ನವರಾತ್ರಿಯ ಒಂಭತ್ತು ದಿನಗಳು ದೇವಿಯ ಒಂಭತ್ತು ವಿವಿಧ ಬಣ್ಣಗಳನ್ನು ಸಂಕೇತಿಸುತ್ತವೆ. ದಿನ–1 ಕಿತ್ತಳೆ, ದಿನ–2 ಬಿಳಿ, ದಿನ–3 ಕೆಂಪು, ದಿನ–4 ಕಡುನೀಲಿ, ದಿನ–5 ಹಳದಿ, ದಿನ–6 ಹಸಿರು, ದಿನ–7 ಬೂದು, ದಿನ–8 ನೇರಳೆ, ದಿನ–9 ನವಿಲು ಹಸಿರು ಬಣ್ಣಗಳಿಂದ ದೇವಿಯನ್ನು ಅಲಂಕರಿಸಲಾಗುತ್ತದೆ. ಅಲ್ಲದೇ, ಹೆಣ್ಣುಮಕ್ಕಳೂ ಸಹ ನವರಾತ್ರಿಯ ಪ್ರತಿದಿನವೂ ಅದೇ ಬಣ್ಣದ ಉಡುಪುಗಳನ್ನು ಧರಿಸಿ ಸಂಭ್ರಮಿಸುತ್ತಾರೆ.

ವಿಜಯದಶಮಿಗೆ ರಾಮಾಯಣದ ಹಿನ್ನೆಲೆಯೂ ಇದೆ. ಶ್ರೀರಾಮನು ರಾವಣನನ್ನು ಸಂಹರಿಸಿದ ದಿನವೆಂದು ಇದನ್ನು ಆಚರಿಸುವ ಸಂಪ್ರದಾಯವಿದೆ. ಹೀಗಾಗಿ ದಸರಾ ದೇವಿಯ ವಿಜಯ ಮತ್ತು ಶ್ರೀರಾಮನ ವಿಜಯ ಎರಡನ್ನೂ ಪ್ರತಿನಿಧಿಸುವ ಮಹತ್ವದ ಹಬ್ಬವಾಗಿದೆ.

**ಐತಿಹಾಸಿಕ ಹಿನ್ನೆಲೆ:** ಮೈಸೂರು ದಸರೆಯ ಇತಿಹಾಸ ಅತ್ಯಂತ ಪ್ರಾಚೀನವಾಗಿದೆ. ಭಾರತದ ವಿವಿಧ ರಾಜವಂಶಗಳ ಕಾಲದಲ್ಲಿಯೇ ದುರ್ಗಾ ಮತ್ತು ಮಹಿಷಮರ್ದಿನಿಯ ಆರಾಧನೆಯ ಶಿಲ್ಪಗಳು ಕಂಡುಬರುವುದರಿಂದ ದಸರಾ ಆಚರಣೆಯು ಪ್ರಾಚೀನ ಕಾಲದಿಂದಲೂ ನಡೆದುಕೊಂಡು ಬಂದಿರುವುದಾಗಿ ಪರಿಗಣಿಸಲಾಗಿದೆ. ಶ್ರೀರಂಗಪಟ್ಟಣದ ಪತನದ ನಂತರ ಮೈಸೂರನ್ನು ರಾಜಧಾನಿಯನ್ನಾಗಿ ಮಾಡಿಕೊಂಡ ಮುಮ್ಮಡಿ ಕೃಷ್ಣರಾಜ ಒಡೆಯರ್ ಅವರು 1799ರಲ್ಲಿ ಮೈಸೂರಿನಲ್ಲಿ ದಸರಾ ಉತ್ಸವಕ್ಕೆ ಮರುಚಾಲನೆ ನೀಡಿದರು.

ವಿಜಯನಗರ ಸಾಮ್ರಾಜ್ಯದ ಕಾಲದಲ್ಲಿ ದಸರಾ ಉತ್ಸವವು ಅತ್ಯಂತ ವೈಭವದಿಂದ ನಡೆಯುತ್ತಿತ್ತು. ಇಂದಿನ ಮೈಸೂರು ದಸರಾ ವಿಜಯನಗರದ ಈ ಪರಂಪರೆಯ ಮುಂದುವರಿದ ರೂಪವಾಗಿದೆ.

**ಮೈಸೂರು ಒಡೆಯರ ಕಾಲದ ದಸರಾ ವೈಭವ:** ಮೈಸೂರು ಅರಸರಾದ ಶ್ರೀ ರಾಜ ಒಡೆಯರ್ ಅವರು ಶಾ.ಶ. 1610ರಲ್ಲಿ ಶ್ರೀರಂಗಪಟ್ಟಣದಲ್ಲಿ ಹತ್ತು ದಿನಗಳ ದಸರಾ ಉತ್ಸವವನ್ನು ಆರಂಭಿಸಿದರು. ನಂತರ ಮೈಸೂರು ಒಡೆಯರ ಆಡಳಿತದಲ್ಲಿ ದಸರಾ ಉತ್ಸವವು ರಾಜವೈಭವದ ಪ್ರಮುಖ ಸಂಕೇತವಾಗಿ ಬೆಳೆಯಿತು. 1648ರಲ್ಲಿ ರಣಧೀರ ಕಂಠೀರವ ನರಸರಾಜ ಒಡೆಯರ್ ಅವರ ಕಾಲದ ದಸರಾ ಆಚರಣೆಗಳ ವಿವರಗಳನ್ನು ಕವಿ ಗೋವಿಂದವೈದ್ಯರು ತಮ್ಮ 'ಕಂಠೀರವ ನರಸರಾಜ ವಿಜಯ' ಕೃತಿಯಲ್ಲಿ ದಾಖಲಿಸಿದ್ದಾರೆ. ಆ ಕಾಲದಲ್ಲಿ ದೇವಿ ಆರಾಧನೆ, ಆಯುಧ ಪೂಜೆ, ರಾಜದರ್ಬಾರ್, ಮಲ್ಲಯುದ್ಧ, ನೃತ್ಯ, ಸಂಗೀತ ಹಾಗೂ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ದಸರೆಯ ಪ್ರಮುಖ ಭಾಗವಾಗಿದ್ದವು.

ಮೈಸೂರು ಒಡೆಯರ ಕಾಲದಲ್ಲಿ ದಸರಾ ರಾಜಮನೆತನದ ಪ್ರಮುಖ ಉತ್ಸವವಾಗಿತ್ತು. ನವರಾತ್ರಿಯ ಸಂದರ್ಭದಲ್ಲಿ ರಾಜರು ಕುಲದೇವತೆ ಹಾಗೂ ಇತರ ದೇವತೆಗಳನ್ನು ಪೂಜಿಸಿ, ಪಟ್ಟದ ಆನೆ ಮತ್ತು ಕುದುರೆಗಳಿಗೆ ಪೂಜೆ ಸಲ್ಲಿಸುತ್ತಿದ್ದರು. ರಾಜದರ್ಬಾರ್, ಆಯುಧ ಪೂಜೆ ಮತ್ತು ವಿಜಯದಶಮಿ ಮೆರವಣಿಗೆಗಳು ಪ್ರಮುಖ ಕಾರ್ಯಕ್ರಮಗಳಾಗಿದ್ದವು.

ಚತುರಂಗಬಲ ಆಯುಧಪೂಜೆಗೆ (32 ಆಯುಧಗಳಪೂಜೆ) ಅಣಿಗೊಂಡ ಆಯುಧಗಳು

ಮಹಾನವಮಿಯಂದು ಪಟ್ಟದ ಕತ್ತಿ ಸೇರಿದಂತೆ ರಾಜವಂಶದ ಆಯುಧಗಳನ್ನು ವಿಶೇಷವಾಗಿ ಪೂಜಿಸಲಾಗುತ್ತದೆ. ಹಿಂದಿನ ಕಾಲದಲ್ಲಿ ರಾಜದರ್ಬಾರ್, ಮಲ್ಲಯುದ್ಧ, ಸಂಗೀತ, ನೃತ್ಯ, ಬಾಣಬಿರುಸು ಮತ್ತು ವಿವಿಧ ರಾಜಕೀಯ ಹಾಗೂ ಸಾಂಸ್ಕೃತಿಕ ಪ್ರದರ್ಶನಗಳು ದಸರೆಯ ಭಾಗವಾಗಿದ್ದವು. ಕಾಲ ಬದಲಾದಂತೆ ಅವುಗಳಲ್ಲಿ ಹಲವು ರೂಪಾಂತರಗೊಂಡಿದ್ದರೂ, ದಸರೆಯ ಮೂಲ ಪರಂಪರೆ ಇಂದಿಗೂ ಮುಂದುವರಿದಿದೆ.

**ಮುಮ್ಮಡಿ ಕೃಷ್ಣರಾಜ ಒಡೆಯರ್:** ಮುಮ್ಮಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ ದಸರಾ ಆಚರಣೆ ವಿಶೇಷ ವೈಭವವನ್ನು ಪಡೆದಿತ್ತು. ಮಹಾನವಮಿಯಂದು ಕತ್ತಿ, ಖಡ್ಗ ಸೇರಿದಂತೆ ರಾಜವಂಶದ ವಿವಿಧ ಆಯುಧಗಳಿಗೆ ಪೂಜೆ ಸಲ್ಲಿಸಲಾಗುತ್ತಿತ್ತು. ವಿಜಯದಶಮಿಯಂದು ರಾಜರು ರಾಜಪೋಷಾಕಿನಲ್ಲಿ ಖಡ್ಗ ಹಿಡಿದು ಮೆರವಣಿಗೆಯಲ್ಲಿ ಭಾಗವಹಿಸುತ್ತಿದ್ದರು. ಆ ಕಾಲದಲ್ಲಿ ಇಂದಿನಂತೆ ಚಿನ್ನದ ಅಂಬಾರಿಯಲ್ಲಿ ರಾಜರು ಸಂಚರಿಸುತ್ತಿರಲಿಲ್ಲ. ಆನೆಗಳು ಎಳೆಯುವ ಬೆಳ್ಳಿಯ ರಥದಲ್ಲಿ ಮಹಾರಾಜರು ಕುಳಿತು ಮೆರವಣಿಗೆಯಲ್ಲಿ ಸಾಗುತ್ತಿದ್ದರು. ನಂತರ ಕುದುರೆಯೇರಿ ಸೈನ್ಯ ವೀಕ್ಷಿಸಿ, ಬನ್ನಿಮರಕ್ಕೆ ಪೂಜೆ ಸಲ್ಲಿಸುವ ಸಂಪ್ರದಾಯವೂ ಇತ್ತು.

**ಚಾಮುಂಡಿ ಬೆಟ್ಟದ ವಿಶೇಷತೆ:** ಮೈಸೂರು ದಸರೆಯ ಧಾರ್ಮಿಕ ಹಿನ್ನೆಲೆಯ ಪ್ರಮುಖ ಕೇಂದ್ರ ಚಾಮುಂಡಿ ಬೆಟ್ಟ. ನವರಾತ್ರಿಯ ಸಂದರ್ಭದಲ್ಲಿ ಚಾಮುಂಡೇಶ್ವರಿ ದೇವಿಗೆ ಪ್ರತಿದಿನ ವಿಶೇಷ ಅಲಂಕಾರ ಮತ್ತು ಪೂಜೆಗಳನ್ನು ನೆರವೇರಿಸಲಾಗುತ್ತದೆ.

ದೇವಿಯನ್ನು ವಿವಿಧ ಶಕ್ತಿರೂಪಗಳಲ್ಲಿ ಅಲಂಕರಿಸುವ ಸಂಪ್ರದಾಯವಿದೆ. ನವರಾತ್ರಿಯ ಹತ್ತು ದಿನಗಳ ಅವಧಿಯಲ್ಲಿ ದೇವಿಯ ವಿವಿಧ ಅಲಂಕಾರಗಳು ಭಕ್ತರನ್ನು ಆಕರ್ಷಿಸುತ್ತವೆ. ವಿಜಯದಶಮಿಯಂದು ದೇವಿಯನ್ನು ಅಪರಾಜಿತೆಯ ರೂಪದಲ್ಲಿ ಆರಾಧಿಸಲಾಗುತ್ತದೆ.

ನವರಾತ್ರಿಯ ಮತ್ತೊಂದು ವಿಶೇಷ ಆಚರಣೆ ಕುಮಾರಿ ಪೂಜೆ. 2–10 ವಯಸ್ಸಿನ ಬಾಲಕಿಯರನ್ನು ದೇವಿಯ ವಿವಿಧ ರೂಪಗಳ ಪ್ರತೀಕವಾಗಿ ಪೂಜಿಸುವ ಸಂಪ್ರದಾಯವೂ ಕೆಲವು ಕಡೆಗಳಲ್ಲಿ ಕಂಡುಬರುತ್ತದೆ.

**ಅರಮನೆಯ ಪ್ರಮುಖ ಆಕರ್ಷಣೆ ಸಿಂಹಾಸನ:** ಮೈಸೂರು ಸಂಸ್ಥಾನದಲ್ಲಿ ಮತ್ತೊಂದು ಪ್ರಮುಖ ಆಕರ್ಷಣೆ ಸಿಂಹಾಸನವಾಗಿದೆ. ಇದು ರತ್ನ ಖಚಿತ ಚಿನ್ನದ ಸಿಂಹಾಸನವಾಗಿದ್ದು ಇದಕ್ಕೆ ಅದರದೆ ಆದ ಇತಿಹಾಸವಿದೆ ದಸರಾ ಸಂದರ್ಭಗಳಲ್ಲಿ ಮಾತ್ರ ವೀಕ್ಷಣೆಗೆ ಸಾರ್ವಜನಿಕರಿಗೆ ಲಭ್ಯವಿದ್ದು, ಈ ಚಿನ್ನದ ಸಿಂಹಾಸನವು ದಸರಾ ಮುಂಚೆ ಒಂದು ಶುಭಮುಹೂರ್ತದಲ್ಲಿ ಖಾಸಗಿ ದರ್ಬಾರ್ ಹಾಲಿನಲ್ಲಿ ಜೋಡಣೆ ಮಾಡಲಾಗುತ್ತದೆ ಸುಮಾರು 30 ರಿಂದ 40 ದಿನಗಳ ಕಾಲ ವೀಕ್ಷಣೆ ಮಾಡಬಹುದಾಗಿದೆ. ಈ ಚಿನ್ನದ ಸಿಂಹಾಸನದಲ್ಲಿ ಹಲವು ವೈಶಿಷ್ಟಗಳು ಕೂಡಿದ್ದು, ಈ ಚಿನ್ನದ ಸಿಂಹಾಸನ ಬೆಳ್ಳಿಯ ಮೆಟ್ಟಿಲು ಹೊಂದಿದ್ದು ಎರಡು ಬದಿಯಲ್ಲಿ ದರ್ಪಣಾ ಸುಂದರಿಯರು ಇದ್ದು, ಮಹಾರಾಜರಿಗೆ ಸ್ವಾಗತ ಮಾಡುವ ಭಂಗಿಯಲ್ಲಿ ನಿಂತಿರುವ ಹಾಗೆ ರೂಪಿಸಲಾಗಿದೆ.

ಇನ್ನು ಈ ಚಿನ್ನದ ಸಿಂಹಾಸನದ ಮೇಲ್ಭಾಗದಲ್ಲಿ ಚಿನ್ನದ ಛಾಮರ ಹೊಂದಿದ್ದು, ಅದಕ್ಕೆ ಮಯೂರ ಪಕ್ಷಿಯನ್ನು ಜೋಡಿಸಲಾಗಿದೆ. ಸುತ್ತಲೂ ಮುತ್ತುಗಳಿಂದ ಅಲಂಕೃತವಾಗಿದೆ. ಇನ್ನು ಸಿಂಹಾಸನದ ಹಿಂಭಾಗದ ಮೇಲ್ಭಾಗದಲ್ಲಿ ಲಕ್ಷ್ಮೀ, ಚಾಮುಂಡೇಶ್ವರಿ ಮತ್ತು ಸರಸ್ವತಿಯ ಮೂರ್ತಿ ಇದ್ದು, ತಳಭಾಗದಲ್ಲಿ ವಿಜಯದಶಮಿಯ ದಿನ ಸಿಂಹಾಸನಕ್ಕೆ ರಾಜವಂಶಸ್ಥರಿಂದ ಹೋಮ ಹವನ ನಡೆಸಿ ಸಿಂಹವನ್ನು ಜೋಡಿಸುತ್ತಾರೆ.

ಮೈಸೂರು ಅರಸರ ಬೆಡಗಿನ ರತ್ನಖಚಿತ ಸ್ವರ್ಣ ಸಿಂಹಾಸನ

"ಸ್ವರ್ಣಕಲಾ ನಿಪುಣ" ಸಿಂಗಣ್ಣಾಚಾರ್ಯ ಈ ಸಿಂಹಾಸನವನ್ನು ಚಿನ್ನಾಭರಣಗಳು, ಬೆಲೆಬಾಳುವ ರತ್ನಗಳು ಮತ್ತು ಬೆಳ್ಳಿಯ ಪ್ರತಿಮೆಗಳಿಂದ ಶೃಂಗರಿಸಿದ್ದಾರೆ. ಕಾಲಕ್ರಮೇಣ ಇದಕ್ಕೆ ಚಿನ್ನದ ಹಾಳೆಗಳು, ನವರತ್ನಗಳು ಮತ್ತು ಕಲಾತ್ಮಕ ಅಲಂಕಾರಗಳನ್ನು ಅಳವಡಿಸಿ ಭವ್ಯರೂಪ ನೀಡಲಾಗಿದೆ.

**ವಿದ್ಯುತ್ ದೀಪಾಲಂಕಾರ:** ನಾಡಹಬ್ಬ ದಸರಾ ಮಹೋತ್ಸವದ ಅಂಗವಾಗಿ

## ಅರಮನೆ ದಸರಾ ಮತ್ತು ನಾಡಹಬ್ಬ ದಸರಾ

**1969ರ ನಂತರ ಮೈಸೂರು ರಾಜಮನೆತನದ ಆಡಳಿತ ಅಂತ್ಯಗೊಂಡ ಹಿನ್ನೆಲೆಯಲ್ಲಿ ದಸರಾ ಆಚರಣೆಯಲ್ಲಿ ಮಹತ್ವದ ಬದಲಾವಣೆ ಉಂಟಾಯಿತು. ಪ್ರಸ್ತುತ ಮೈಸೂರಿನಲ್ಲಿ ದಸರಾ ಎರಡು ಪ್ರಮುಖ ರೂಪಗಳಲ್ಲಿ ನಡೆಯುತ್ತದೆ. ಒಂದೆಡೆ ಅರಮನೆಯೊಳಗೆ ರಾಜಮನೆತನದ ಪರಂಪರೆಯನ್ನು ಮುಂದುವರಿಸಿಕೊಂಡು ಧಾರ್ಮಿಕ ಮತ್ತು ಸಾಂಪ್ರದಾಯಿಕ ಆಚರಣೆಗಳು ನಡೆಯುತ್ತವೆ. ಖಾಸಗಿ ದರ್ಬಾರ್, ಸರಸ್ವತಿ ಪೂಜೆ, ಆಯುಧ ಪೂಜೆ, ವಿಜಯದಶಮಿ, ಶಮೀಪೂಜೆ ಹಾಗೂ ಇತರ ಸಾಂಪ್ರದಾಯಿಕ ವಿಧಿವಿಧಾನಗಳು ಇದರ ಭಾಗವಾಗಿವೆ. ಮತ್ತೊಂದೆಡೆ ಕರ್ನಾಟಕ ಸರ್ಕಾರವು ಸಾರ್ವಜನಿಕರಿಗಾಗಿ 'ನಾಡಹಬ್ಬ ದಸರಾ'ವನ್ನು ಆಯೋಜಿಸುತ್ತದೆ. ಜಂಬೂ ಸವಾರಿ, ಸಾಂಸ್ಕೃತಿಕ ಕಾರ್ಯಕ್ರಮಗಳು ಮತ್ತು ವಿವಿಧ ಸಾರ್ವಜನಿಕ ಕಾರ್ಯಕ್ರಮಗಳು ಇದರ ಪ್ರಮುಖ ಆಕರ್ಷಣೆಗಳಾಗಿವೆ. ಹೀಗಾಗಿ ಇಂದಿನ ಮೈಸೂರು ದಸರಾ ರಾಜಮನೆತನದ ಪರಂಪರೆ ಮತ್ತು ಆಧುನಿಕ ಸಾರ್ವಜನಿಕ ಉತ್ಸವದ ಸಮನ್ವಯವಾಗಿ ರೂಪುಗೊಂಡಿದೆ.**



ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ (CESC) ವತಿಯಿಂದ ಮೈಸೂರು ನಗರದಲ್ಲಿ ಸುಮಾರು 130 ರಿಂದ 136 ಕಿಲೋಮೀಟರ್ ಉದ್ದದ ರಸ್ತೆಗಳಿಗೆ ವೈವಿಧ್ಯಮಯ ಹಾಗೂ ಆಕರ್ಷಕ ವಿದ್ಯುತ್ ದೀಪಾಲಂಕಾರ ಮಾಡಲಾಗುತ್ತದೆ. ಇಡೀ ಮೈಸೂರು ನಗರವನ್ನು – ಕಂಗೊಳಿಸುವಂತೆ ಮಾಡುವ ಈ ದೀಪಾಲಂಕಾರವು ನಗರದ ಸುಮಾರು 118 ಪ್ರಮುಖ ವೃತ್ತಗಳು ಮತ್ತು ಜಂಕ್ಷನ್ ಗಳನ್ನು ಒಳಗೊಂಡಿರುತ್ತದೆ. ಇದರೊಂದಿಗೆ ಕರ್ನಾಟಕದ ಸಂಸ್ಕೃತಿ ಮತ್ತು ಸಾಧಕರನ್ನು ಬಿಂಬಿಸುವ 75ಕ್ಕೂ ಹೆಚ್ಚು ಕಲಾಕೃತಿಗಳನ್ನು ಎಲ್ಇಡಿ ದೀಪಗಳ ಮೂಲಕ ಪ್ರದರ್ಶಿಸಲಾಗುತ್ತದೆ. ದೇಶ ಹಾಗೂ ವಿದೇಶಗಳಿಂದ ಬರುವ ಪ್ರವಾಸಿಗರ ವೀಕ್ಷಣೆಗಾಗಿ ಈ ಅದ್ಭುತ ಬೆಳಕಿನ ಹಬ್ಬವನ್ನು ಒಟ್ಟು 21 ದಿನಗಳ ಕಾಲ ಮುಂದುವರಿಸಲಾಗುತ್ತದೆ.

**ಚಾಮುಂಡೇಶ್ವರಿ ಉತ್ಸವ ಮತ್ತು ಜಂಬೂ ಸವಾರಿ:** ಮೈಸೂರು ದಸರಾ ಮತ್ತು ಆನೆಗಳ ನಡುವಿನ ಸಂಬಂಧವು ಬಹಳ ಹಳೆಯದು. ಒಡೆಯರ ಕಾಲದ ರಾಜವೈಭವದ ಮೆರವಣಿಗೆಗಳಿಂದ ಆರಂಭವಾದ ಈ ಪರಂಪರೆ, ಇಂದು ಸರ್ಕಾರದ ನೇತೃತ್ವದಲ್ಲಿ ನಡೆಯುವ ಜಂಬೂ ಸವಾರಿಯ ರೂಪದಲ್ಲಿ ಮುಂದುವರಿದಿದೆ. ಜಂಬೂಸವಾರಿ ಆರಂಭಕ್ಕೆ ಮುನ್ನ ಶುಭ ಕುಂಭ ಲಗ್ನದಲ್ಲಿ ಅರಮನೆಯ ಬಲರಾಮ ದ್ವಾರದಲ್ಲಿ ನಂದಿಧ್ವಜಕ್ಕೆ ಮೊದಲು ಪೂಜೆ ಸಲ್ಲಿಸಲಾಗುತ್ತದೆ. ಚಿನ್ನದ ಅಂಬಾರಿಯಲ್ಲಿ ವಿರಾಜಮಾನಳಾಗಿ ಆಸೀನಳಾಗಿರುವ ತಾಯಿ ಚಾಮುಂಡೇಶ್ವರಿ ದೇವಿ ಮೂರ್ತಿಗೆ ಪುಷ್ಪಾರ್ಚನೆ ಸಲ್ಲಿಸಲಾಗುತ್ತದೆ. ಆ ಬಳಿಕ 24 ಕುಶಾಲತೋಪುಗಳ ಗೌರವವನ್ನು ಸಮರ್ಪಣೆ ಮಾಡಲಾಗುತ್ತದೆ. ಅಲ್ಲಿಂದ ಅರಮನೆ ಆವರಣದಲ್ಲಿ ವಿಜಯದಶಮಿಯ ಅತ್ಯಾಕರ್ಷಕ ಮೆರವಣಿಗೆಗೆ ಚಾಲನೆ ದೊರೆಯುತ್ತದೆ. ಜಂಬೂಸವಾರಿಯು ಅರಮನೆ ಆವರಣದಿಂದ ಬನ್ನಿಮಂಟಪದವರೆಗೆ ನಡೆಯುತ್ತದೆ. ಚಿನ್ನದ ಅಂಬಾರಿಯಲ್ಲಿ ವಿರಾಜಮಾನಳಾದ ದೇವಿ ಚಾಮುಂಡೇಶ್ವರಿಯನ್ನು ಹೊತ್ತು 14 ಅಲಂಕೃತ ಗಜಗಳೊಂದಿಗೆ, ಜನಸಾಗರದೊಡನೆ ಧೀರ–ಗಂಭೀರ ನಡಿಗೆಯಲ್ಲಿ ಮೆರವಣಿಗೆಯಲ್ಲಿ ಸಾಗುವ ಗಜರಾಜನ ಠೀವಿಗೆ ಸರಿಸಾಟಿಯಿಲ್ಲ. ಭಾರತದ ಬೇರೆಲ್ಲೂ ದಸರಾ ಸಮಯದಲ್ಲಿ ಇಷ್ಟೊಂದು ಸಂಖ್ಯೆಯಲ್ಲಿ ಆನೆಗಳು ಪಾಲ್ಗೊಳ್ಳುವುದಿಲ್ಲ.

ಅಂಬಾರಿ ಹೊತ್ತ ಬಲರಾಮನ ಜತೆಗೆ ಪೊಲೀಸ್ ಬ್ಯಾಂಡ್ ನ ಆಕರ್ಷಕ ತಾಳವಾದ್ಯ ಕಳೆಗಟ್ಟುತ್ತದೆ. ಅಲ್ಲದೆ, ಕಂಸಾಳೆ ಕುಣಿತ, ಕಲಾತಂಡಗಳ ನೃತ್ಯ ಪ್ರದರ್ಶನಗಳ ಜತೆಗೆ ರಾಜ್ಯದ ವಿವಿಧ ಜಿಲ್ಲೆಗಳ ಸಂಸ್ಕೃತಿ ಸಾರುವ ಸ್ತಬ್ಧಚಿತ್ರಗಳು ಎಲ್ಲರ ಗಮನ ಸೆಳೆಯುತ್ತದೆ. ಇದರ ವೀಕ್ಷಣೆಗೆ ಸಾವಿರಾರು ಸಂಖ್ಯೆಯಲ್ಲಿ ಜನರು ಸೇರುತ್ತಾರೆ.

ದಸರೆಯ ವಿಶೇಷ ಕಾರ್ಯಕ್ರಮಗಳು: ಯುವಸಂಭ್ರಮ, ಯುವದಸರಾ: ದಸರಾಗೆ ಯುವ ಜನರನ್ನು ಸೆಳೆಯಲು ಯುವ ಸಂಭ್ರಮ ಮತ್ತು ಯುವ ದಸರಾ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಲಾಗುತ್ತದೆ. ಮೈಸೂರು ವಿಶ್ವವಿದ್ಯಾಲಯದಲ್ಲಿರುವ ಬಯಲು ರಂಗಮಂದಿರದಲ್ಲಿ ಯುವಸಂಭ್ರಮ ಸಮಾರಂಭ ನಡೆಯುತ್ತದೆ. ಇದರಲ್ಲಿ ಸ್ಥಳೀಯ ಕಲಾವಿದರಿಗೆ ಆದ್ಯತೆ ನೀಡಲಾಗುತ್ತದೆ. ಜನಪದ ಸೇರಿದಂತೆ ವಿವಿಧ ಪ್ರಾಕಾರಗಳ ನೃತ್ಯಕಲಾವಿದರ ಪ್ರದರ್ಶನ ಗಮನ ಸೆಳೆಯುತ್ತದೆ. ವಿವಿಧ ಜಿಲ್ಲೆಗಳ ಶಾಲಾ–ಕಾಲೇಜು ವಿದ್ಯಾರ್ಥಿಗಳು ಈ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿಕೊಡುತ್ತಾರೆ. ಇನ್ನು ಯುವದಸರಾದಲ್ಲಿ ಸಿನಿಮಾತಾರೆಯರು ಹಾಗೂ ಖ್ಯಾತಗಾಯಕರ ಸಮಾಗಮವಾಗುತ್ತದೆ. ಮಹಾರಾಜ ಮೈದಾನದಲ್ಲಿ ಸಮಾರಂಭ ನಡೆಯುತ್ತದೆ. ತಮ್ಮ ನೆಚ್ಚಿನ ನಟ–ನಟಿಯರು, ಗಾಯಕರನ್ನು ನೋಡಲು ಅಪಾರ ಸಂಖ್ಯೆಯಲ್ಲಿ ಯುವದಸರಾದಲ್ಲಿ ಜನ ಸೇರುತ್ತಾರೆ.

**ಕಂಬಳ:**ಮೈಸೂರು ದಸರಾದಲ್ಲಿ ಇದೇ ಮೊದಲ ಬಾರಿಗೆ ಕರಾವಳಿಯ ಕೃಷಿ ಸಂಸ್ಕೃತಿ ಹಾಗೂ ಜನಪದದ ಪ್ರತೀಕವಾದ 'ಕಂಬಳ' ಆಯೋಜನೆ ಮಾಡಲಾಗುತ್ತಿದೆ. ಅಕ್ಟೋಬರ್ 18 ಮತ್ತು 19 ರಂದು ಮೈಸೂರಿನ ಸಾತಗಳ್ಳಿಯಲ್ಲಿ ಆಯೋಜಿಸಲು ಅಧಿಕೃತವಾಗಿ ಸಿದ್ಧತೆಗಳು ನಡೆದಿವೆ. ದಷ್ಟಪುಷ್ಟವಾಗಿ ಬೆಳೆಸಿದ ಕೋಣಗಳನ್ನು ಹಸನಾಗಿ ಹದಮಾಡಿದ ಮಣ್ಣಿನ ಗದ್ದೆಯಲ್ಲಿ ಓಡಿಸುವ ಸ್ಪರ್ಧೆಯೇ ಕಂಬಳ. ಈ ಕ್ರೀಡೆ ದಕ್ಷಿಣಕನ್ನಡ ಮತ್ತು ಉಡುಪಿಜಿಲ್ಲೆಯ ಜನಪದದೊಂದಿಗೆ ಹಾಸು ಹೊಕ್ಕಾಗಿದೆ. ಸಾಂಸ್ಕೃತಿಕ ಹಿನ್ನೆಲೆಯ ಕ್ರೀಡೆಯನ್ನು ದಸರಾದಲ್ಲಿ ಆಯೋಜಿಸಲಾಗುತ್ತಿದೆ.

**ಮೇಳಗಳು:** ಕೃಷಿ, ಆಹಾರ ಮೇಳಗಳನ್ನು ದಸರಾದಲ್ಲಿ ನಡೆಸಲಾಗುತ್ತದೆ. ರಾಜ್ಯದ ನಾನಾಭಾಗಗಳ ಸ್ಥಳೀಯ ಹಾಗೂ ವಿಶೇಷ ತಿನಿಸುಗಳು ಮಳಿಗೆಗಳಲ್ಲಿ ಸಿಗುತ್ತವೆ. ಆಹಾರ ಪ್ರಿಯರಿಗೆ ಈ ಮೇಳ ಖುಷಿ ಕೊಡುತ್ತದೆ. ಇಲ್ಲಿ ಸ್ಪರ್ಧೆಗಳನ್ನು ಸಹ ಆಯೋಜನೆ ಮಾಡಲಾಗುತ್ತದೆ. ತಿನ್ನುವ ಮತ್ತು ಅಡುಗೆ ಸ್ಪರ್ಧೆಗಳು ನಡೆಯುತ್ತವೆ. ವಿಜೇತರಿಗೆ ವಿಶೇಷ ಬಹುಮಾಗಳು ಸಹ ಇರುತ್ತವೆ. ಕೃಷಿ ಮೇಳವು ರೈತರಿಗೆ ಸಹಕಾರಿಯಾಗಲಿದೆ. ನಾನಾ ತಳಿಯ ಬೆಳೆಗಳು ಮತ್ತು ಹಣ್ಣುಗಳ ಪ್ರದರ್ಶನ, ಮಾರಾಟಕ್ಕೆ ಅವಕಾಶ ಇರುತ್ತದೆ. ರೈತರಿಗೆ ಕೃಷಿಸಂಬಂಧಿತ ಸಲಹೆಗಳಿಗಾಗಿ ವಿಚಾರಣಾ ಸಂಕಿರಣಗಳನ್ನು ಸಹ ಆಯೋಜನೆ ಮಾಡಲಾಗುತ್ತದೆ.

**ಪಂಜಿನ ಕವಾಯತು:** ವಿಜಯದಶಮಿಯಂದು ಜಂಬೂಸವಾರಿ ಮೆರವಣಿಗೆ ಬಳಿಕ ಸಂಜೆ ಮೈಸೂರಿನ ಬನ್ನಿಮಂಟಪ ಮೈದಾನದಲ್ಲಿ ನಡೆಯುವ ಅತ್ಯಂತ ಆಕರ್ಷಕ ಮತ್ತು ರೋಮಾಂಚಕ ಅಂತಿಮ ಕಾರ್ಯಕ್ರಮ ಪಂಜಿನ ಕವಾಯತು. ಇದು ಪೊಲೀಸ್ ಪಡೆಗಳ ಕವಾಯತು, ಸಾಹಸ ಪ್ರದರ್ಶನ ಹಾಗೂ ಬಣ್ಣಬಣ್ಣದ ಪಟಪಟಿಸುವ ಪಂಜುಗಳ ಬೆಳಕಿನ ಸಂಭ್ರಮದೊಂದಿಗೆ ಕಣ್ಮನ ಸೆಳೆಯುತ್ತದೆ. ಅತ್ಯಾಕರ್ಷಕ ಅಶ್ವಾರೋಹಿ ದಳದ ಸಾಹಸಗಳು, ಮೈ ಜುಮ್ಮೆನಿಸುವ ಮೋಟಾ ರ್ ಸೈಕಲ್ ಸಾಹಸ ಪ್ರದರ್ಶನಗಳು (ಡೇರ್ ಡೆವಿಲ್ ಸ್ಟಂಟ್ಸ್), ಪೊಲೀಸ್ ಬ್ಯಾಂಡ್ ವಾದನ ಮತ್ತು ಪಂಜುಗಳೊಂದಿಗೆ ಸಾಮೂಹಿಕ ಕವಾಯತು ನಡೆಯುತ್ತದೆ. ರಾತ್ರಿಯ ವೇಳೆ ಆಕಾಶದಲ್ಲಿ ಮೂಡುವ ವರ್ಣರಂಜಿತ ಸುಂದರ ಸಿಡಿಮದ್ದು ಪ್ರದರ್ಶನ ಹಾಗೂ ಲೇಸರ್/ಡ್ರೋನ್ ಶೋ ಕೂಡ ಗಮನ ಸೆಳೆಯುತ್ತದೆ. ದಸರಾಗೆ ಅಂತಿಮ ಸ್ಪರ್ಶ ನೀಡುವ ಕಾರ್ಯಕ್ರಮ ಇದಾಗಿದೆ. ರಾಜರ ಕಾಲದಿಂದಲೂ ನಡೆದುಕೊಂಡು ಬಂದಿರುವ ಈ ಪರಂಪರೆಯು ದಸರಾ ಉತ್ಸವದ ಸಮಾಪ್ತಿಯನ್ನು ಸಾರುತ್ತದೆ.

ಅರಮನೆಯೊಳಗಿನ ಸಾಂಪ್ರದಾಯಿಕ ಆಚರಣೆಗಳು ಮೈಸೂರು ಒಡೆಯರ ಇತಿಹಾಸವನ್ನು ನೆನಪಿಸಿದರೆ, ಸಾರ್ವಜನಿಕ ದಸರಾ ಕಾರ್ಯಕ್ರಮಗಳು ಆ ಪರಂಪರೆಯನ್ನು ಜನಸಾಮಾನ್ಯರೊಂದಿಗೆ ಸಂಪರ್ಕಿಸುತ್ತವೆ.



ಡಾ. ಶಾಲಿನಿ ರಜನೀಶ್
ಸರ್ಕಾರದ ಮುಖ್ಯ ಕಾರ್ಯದರ್ಶಿ
ಬೆಂಗಳೂರು

**ಸಮಾರೋಪ:** ಮೈಸೂರು ದಸರಾ ಹಲವು ಶತಮಾನಗಳ ಇತಿಹಾಸ, ಧಾರ್ಮಿಕ ನಂಬಿಕೆ, ರಾಜಪರಂಪರೆ, ಕಲೆ, ಸಂಸ್ಕೃತಿ ಮತ್ತು ಜನಪಾಲ್ಗೊಳ್ಳುವಿಕೆಯ ಅಪೂರ್ವ ಸಂಗಮವಾಗಿದೆ. ವಿಜಯನಗರದ ಪರಂಪರೆಯಿಂದ ಮೈಸೂರು ಒಡೆಯರ ರಾಜವೈಭವದವರೆಗೆ ಮತ್ತು ಅಲ್ಲಿಂದ ಇಂದಿನ ನಾಡಹಬ್ಬದ ರೂಪದವರೆಗೆ ದಸರಾ ಹಲವು ಹಂತಗಳನ್ನು ದಾಟಿ ಬೆಳೆದಿದೆ.

ಬನ್ನಿ, ಈ ವರ್ಷದ ನಾಡಹಬ್ಬ ದಸರಾದಲ್ಲಿ ಎಲ್ಲರೂ ಪಾಲ್ಗೊಂಡು, ವೈವಿಧ್ಯಮ ಆಚರಣೆಗಳನ್ನು ಕಣ್ತುಂಬಿಕೊಳ್ಳೋಣ!

SATYAMITHI KANNADA DAILY MORNING OWNER, PUBLISHER, BY: CHANNAVEERAPPA NINGAPPA SAMAGANDI PUBLISHED FROM: KELAGAL{ETH, NEAR BASAVESHWAR DEVASTAN, HOME NO. 169, WARD NO, 4 MAIN ROAD GAJEDRAGAD, GADAG KARNATAKA - 582114 PRINTED AT: MAILARALINGESHWAR PRINTERS, WARD NO, 3, SUDI TQ, GAJENDRAGAD, GADAG, KARNATAKA- 582114